ಸಂಪುಟ : 10 ಸಂಚಿಕೆ 10 ಪುಟ : 4+2 ಬೆಲೆ: 3.00 ಬುಧವಾರ ಫೆಬ್ರವರಿ 5 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 10 Pages : 4+2 Price : 3.00 Wednesday February 5 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

SJSS LITTLE CHAMPS BB GURUKULAM PRE - PRIMARY & PRIMARY ENGLISH MEDIUM SCHOOL, MALLASAMUDRA- GADAG.
Near DAR POLICE QUARTERS, MALLASAMUDRA-GADAG-582103.
ADMISSION OPEN 2022-2023
Primary Classes 1st to 5th
PLAY HOME : 1-10 to 2-10
NURSERY : 2-10 to 3-10
L.K.G : 3-05 to 4-05
U.K.G : 4-05 to 5-05
1st Standard : 5-05 to 7-00
ADMISSIONS OPEN 2022-23
No Donation
LIMITED SEATS Only! Application Forms Will Be Available in The Office
CONTACT NO: 9480352778, 9742034143, 9620427360.
email:sjssgurukulam@gmail.com Web: www.sjssgurukulam.com

ಇಂದಿನ ನೀರು ಪೂರೈಕೆ ವಿವ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ:05 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 27 – ಕಾಶಿ ವಿಶ್ವನಾಥ್ ನಗರ, ಅಸೂಟಿಯವರ ಲೈನ್, ಕಣವಿಯವರ ಲೈನ್, ಹನುಮಂತ ದೇವರಗುಡಿ, ಮಾಳಕೋಟೇಶ್ವರ ಗುಡಿ, ವಿ ಆರ್ ಎಲ್ ಆಫೀಸ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 28 – ಪಂಚಾಕ್ಷರಿ ನಗರ 5 ಮತ್ತು 6ನೇ ಕ್ರಾಸ್ ಗಳು ವಾರ್ಡ್ ನಂ. 29 – ಮೆಂಬರ್ ಲೈನ್, ಭಾಂಡಗೆ ಲೈನ್, ಗುಂಪಿನ ಮನೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 31, 32, 33 – ನಾವಳ್ಳಿ, ಬಸಯ್ಯ ಡಾಕ್ಟರ್ ಲೈನ್, ಪುರದ ಭಾಗ 2 ಭಾಗಗಳು, ಮೇರವಾಡೆ ಲೈನ್, ಧಾರವಾಡದವರ ಲೈನ್, ಹಳೇ ಕಚೇರಿ, ಕಿಲ್ಲಾ, ಡಂಬಳದವರ ಲೈನ್, ಹಣಪಿನ ಓಣಿ, ಗುಜ್ಜರ ಬಸ್ತಿ, ತ್ರಿಕೋಟೇಶ್ವರ ರಸ್ತೆ.

ಪ್ರಕಟಣೆ:ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ಪೌರಾಯುಕ್ತರು ತಿಳಿಸಿದ್ದಾರೆ.

ಗದಗ ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಚನ್ನವೀರಶರಣರ 30ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ಅಂಗವಾಗಿ ಮಹಾರಥೋತ್ಸವವು ಸಂಭ್ರಮ, ಸಡಗರದಿಂದ ಜರುಗಿತು.

ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

ಫೆ. 6ರಂದು 110ಕೆ.ವ್ಹಿ. ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ 110 ಕೆವಿ ಬ್ರೇಕರ್ ಓವರ್‌ಹಾಲಿಂಗ್/ದುರಸ್ತಿ ಕಾಮಗಾರಿ ಕೈಗೊಳ್ಳುವುದರಿಂದ ಮದ್ಯಾಹ್ನ 12 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಬೆಳ್ಳಟ್ಟಿ ಉಪಕೇಂದ್ರದಿಂದ ಪೂರೈಸಲ್ಪಡುವ ಎಲ್ಲಾ ನೀರಾವರಿ ಪಂಪ್‌ಸೆಟ್, ಕುಡಿಯುವ ನೀರು ಮತ್ತು ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

ಚಿಕೇನಕೊಪ್ಪದ ಚನ್ನವೀರಶರಣರ 30ನೇ ಜಾತ್ರಾ ಮಹೋತ್ಸವದ ಅಂಗವಾಗಿ ಸಾಮೂಹಿಕ ವಿವಾಹ

ಸಾಮೂಹಿಕ ವಿವಾಹದಿಂದ ದುಂದುವೆಚ್ಚಕ್ಕೆ ಕಡಿವಾಣ

■ವಿಜಯಸಾಕ್ಷಿ ಸುದ್ದಿ, ಗದಗ

ದುಂದುವೆಚ್ಚದ ಮದುವೆಗೆ ನಮ್ಮ ಜನರು ಆಸ್ತಿ, ಬಂಗಾರ, ಹಣ ಕಳೆದುಕೊಂಡು ಹಣಕಾಸಿನ ತೊಂದರೆ ಅನುಭವಿಸುತ್ತಾರೆ. ಹೊಲ, ಮನೆಗಳ ಮೇಲೆ ಸಾಲ ಮಾಡಿ ಶೂಲದಲ್ಲಿ ಸಿಲುಕುತ್ತಾರೆ. ಸಾಮೂಹಿಕ ವಿವಾಹದಿಂದ ದುಂದುವೆಚ್ಚಕ್ಕೆ ಕಡಿವಾಣ ಹಾಕಿ, ನೆಮ್ಮದಿಯ ಬದುಕಿಗೆ ಸಹಾಯವಾಗುವುದು ಎಂದು ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಶ್ರೀ ಡಾ. ಕಲ್ಲಯ್ಯಜ್ಜನವರು ನುಡಿದರು.

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಶ್ರೀ ಚನ್ನವೀರಶರಣರ ಮಠದಲ್ಲಿ ಶ್ರೀ ಚನ್ನವೀರಶರಣರ 30ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಶ್ರೀಗಳು ಆಶೀರ್ವಚನ ನೀಡುತ್ತಿದ್ದರು.

ಚನ್ನವೀರಶರಣರು ಶಿವಯೋಗಿಗಳಾಗಿ ಬಂದವರು, ತ್ರಿಕಾಲಜ್ಞಾನಿಗಳಾಗಿದ್ದವರು. ಅವರ ಪುಣ್ಯಕ್ಷೇತ್ರದಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಟ್ಟ ದಂಪತಿಗಳು ಪರಸ್ಪರ ನಂಬಿಕೆ, ವಿಶ್ವಾಸ, ಪ್ರೀತಿಯನ್ನು ಹೊಂದಿ ಆದರ್ಶದ ದಾಂಪತ್ಯ ಜೀವನ ಬದುಕಿ, ಉಳಿದ ಜನರಿಗೆ ಮಾದರಿಯಾಗುವ ರೀತಿಯಲ್ಲಿ ಕುಟುಂಬ ಜೀವನ ನಿರ್ವಹಿಸಬೇಕೆಂದು ಕಿವಿಮಾತು ಹೇಳಿದರು.

ಶರಣಶ್ರೀ ಪ್ರಶಸ್ತಿ ಪುರಸ್ಕೃತ ಎಸ್.ವ್ಹಿ. ಪಾಟೀಲ ಮಾತನಾಡಿ, ಚನ್ನವೀರ ಶರಣರು ಈ ಯುಗದ ವಿಸ್ಮಯ. ಅವರು ಹೆಚ್ಚು ಹೆಚ್ಚು ನಾಟಕಗಳನ್ನು ಆಡಿಸುತ್ತಿದ್ದ ಉದ್ದೇಶ ಮನೋರಂಜನೆ ಅಲ್ಲ, ಮನೋವಿಕಾಸಕ್ಕಾಗಿ ಆಗಿತ್ತು ಎಂದು ತಿಳಿಸಿ ಶರಣರ ಒಡನಾಟವನ್ನು ಸ್ಮರಿಸಿದರು.

ಮುದಗಲ್ಲ ಮಹಾಂತಸ್ವಾಮೀಜಿ ಮಾತನಾಡಿ, ವಿವಾಹ ಕಲ್ಯಾಣ ಮಹೋತ್ಸವದಲ್ಲಿ ಭಾಗಿಗಳಾದ ದಂಪತಿಗಳು ಭಾಗ್ಯಶಾಲಿಗಳು. ಶರಣರ ಭಕ್ತಿ ಪರಂಪರೆ ಬೆಳೆಸಿಕೊಂಡು ಶರಣ ಧರ್ಮದ ಜೀವನ ನಿರ್ವಹಿಸಿ ದಾಂಪತ್ಯ ಧರ್ಮ ಪಾಲಿಸಲು ತಿಳಿಸಿದರು.

ಇದೇ ಸಂದರ್ಭದಲ್ಲಿ ಅರಹುಣಸಿಯ ನಿವೃತ್ತ ಶಿಕ್ಷಕ ದಿ. ಕೆ.ಬಿ. ಕಂಬಳಿ ವಿರಚಿತ ಶ್ರೀ ಚನ್ನವೀರ ಶರಣರ ಲೀಲಾಮೃತ 'ಮೌನಯೋಗಿ' 4ನೇ ಮುದ್ರಣ ಗ್ರಂಥ ಲೋಕಾರ್ಪಣೆಗೊಳಿಸಲಾಯಿತು. ರಾಜ್ಯ ಪ್ರಶಸ್ತಿ ಪುರಸ್ಕೃತ ಸಾಹಿತಿ, ನಾಟಕಕಾರ ಗುಂಡೂರಿನ ಎಸ್.ವ್ಹಿ. ಪಾಟೀಲ ಅವರಿಗೆ ಶ್ರೀ ಶರಣರಮಠ ಬಳಗಾನೂರ ಹಾಗೂ ಸಿದ್ದಲಿಂಗನಗೌಡ ಎಸ್. ಜಂಗ್ಲೆಪ್ಪಗೌಡ್ರ ಮೆಮೋರಿಯಲ್ ಉಮಾ ವಿದ್ಯಾಶ್ರೀ ಟ್ರಸ್ಟ್ ನವಲಗುಂದ ಇವರ ಸಹಯೋಗದಲ್ಲಿ 'ಶರಣಶ್ರೀ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಹಿರೇಮಾಗಡಿಯ ಮ.ನಿ.ಪ್ರ. ಶಿವಮೂರ್ತಿ ಮುರಘರಾಜೇಂದ್ರ ಮಹಾಸ್ವಾಮಿಗಳು ಸನ್ನಿಧಾನ ವಹಿಸಿದ್ದರು. ಶಿವಪ್ರಕಾಶ ಶರಣರು ಶಿವಯೋಗಿ ದೇವರು ವೇದಿಕೆಯಲ್ಲಿದ್ದರು. ಶ್ರೀ ಶಿವಶಾಂತವೀರ ಶರಣರು ನೇತೃತ್ವ ವಹಿಸಿದ್ದರು.

ಇದೇ ಸಂದರ್ಭದಲ್ಲಿ ಸದ್ಭಕ್ತರಿಂದ ಶ್ರೀ ಶಿವಶಾಂತವೀರ ಶರಣರ ತುಲಾಭಾರ ಸೇವೆ ಜರುಗಿದವು. ಶರಣರ ವಿದ್ಯಾಪೀಠದ ಮಕ್ಕಳಿಂದ ಯೋಗ ಪ್ರದರ್ಶನ ಜರುಗಿತು. ಉಡುಪಿಯ ಸ್ವರ ಚಿತ್ತಾರ ಕಲರ್ಸ್ ಕನ್ನಡ ಖ್ಯಾತಿಯ ಕಲಾಸಿಂಧು ಕಲಾವತಿ ದಯಾನಂದ ಹಾಗೂ ತಂಡದವರಿಂದ ಜರುಗಿದ ಭಕ್ತಿ ರಸಮಂಜರಿ ಕಾರ್ಯಕ್ರಮ ಎಲ್ಲರ ಮನಸೂರೆಗೊಂಡಿತು.

ಕನಕಗಿರಿಯ ಸುವರ್ಣಗಿರಿ ವಿರಕ್ತಮಠದ ಮ.ನಿ.ಪ್ರ. ಡಾ. ಚನ್ನಮಲ್ಲ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಮನುಷ್ಯ ಜನ್ಮ ಹೊತ್ತು ಭೂಮಿಗೆ ಬಂದ ನಾವು ಸಮಾಜಕ್ಕೆ ವಿಶೇಷ ಕೊಡುಗೆ ನೀಡುವ ಕಾರ್ಯ ಮಾಡಬೇಕು. ಸಮಾಜದಲ್ಲಿ ಸರ್ವರನ್ನೂ ಪ್ರೀತಿಸುವ ಸರ್ವರ ಬಗ್ಗೆ ಅಂತಃಕರಣ ಹೊಂದಿರಬೇಕು. ಸಮಾಜವೇ ನನ್ನ ಕುಟುಂಬ ಎಂದು ನಂಬಿ ಬಾಳಿದವರು ಶರಣರು. ಅವರ ನುಡಿಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಜೀವನದ ಸಾರ್ಥಕತೆ ಹೆಚ್ಚಿಸಿಕೊಳ್ಳಬೇಕೆಂದರು.

ಮಾಜಿ ಸಚಿವರಾದ ಬಸವರಾಜಪಾಟೀಲ ಅನ್ವರಿ, ಅಲ್ಲಂ ವೀರಭದ್ರಪ್ಪ, ಜಿ.ಪಂ ಮಾಜಿ ಸದಸ್ಯ ಹಾಲಪ್ಪ ಗಾದಿಗನೂರ, ಭೀಮಸಿಂಗ ರಾಠೋಡ, ಪಿ.ಸಿ. ಹಿರೇಮಠ ವೇದಿಕೆಯಲ್ಲಿದ್ದರು.

ಬೆಂಗಳೂರಿನ ಗೀತಾ ಭತ್ತದ ಹಾಗೂ ತಂಡದವರಿಂದ ಸಂಗೀತ ಸೇವೆ ಜರುಗಿತು. ಬಿ.ವಾಯ್. ಡೊಳ್ಳಿನ ಶರಣಶ್ರೀ ಪ್ರಶಸ್ತಿ ವಾಚನ ಮಾಡಿದರು. ಶಿವಲಿಂಗಶಾಸ್ತ್ರಿ ಸಿದ್ದಾಪುರ ಸ್ವಾಗತಿಸಿದರು. ಬೆಂಗಳೂರಿನ ಆಕಾಶವಾಣಿ ನಿರೂಪಕಿ ಸವಿತಾ ಶಿವಕುಮಾರ ನಿರೂಪಿಸಿದರು. ಶಿವಶರಣಗೌಡ ಯರಡೋಣಿ ವಂದಿಸಿದರು. ಸಾಮೂಹಿಕ ವಿವಾಹದಲ್ಲಿ 39 ಜೊತೆ ದಂಪತಿಗಳು ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

'ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ' ಕಾರ್ಯಕ್ರಮದಲ್ಲಿ ಶೇಖರಗೌಡ ರಾಮತ್ನಾಳ

ಮಕ್ಕಳ ರಕ್ಷಣಾ ನೀತಿಯನ್ನು ಕಡ್ಡಾಯವಾಗಿ ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳಿಗೆ ಶಿಕ್ಷಣ ಹಾಗೂ ರಕ್ಷಣೆ ನೀಡುವುದು ಶಿಕ್ಷಕರ ಕರ್ತವ್ಯವಾಗಿದೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ರಾಮತ್ನಾಳ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಗದಗ ಇವರ ಸಹಯೋಗದಲ್ಲಿ ಜಿಲ್ಲಾ ಮಟ್ಟದ ಶಿಕ್ಷಣ ಅಧಿಕಾರಿಗಳಿಗೆ 'ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ' ಎಂಬ ಶೀರ್ಷಿಕೆಯಡಿ ಆರ್.ಟಿ.ಇ ಕಾಯ್ದೆ, ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆಯ ಕುರಿತ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ರಕ್ಷಣೆ ಹಾಗೂ ಶಿಕ್ಷಣ ನೀಡುವುದು ಶಿಕ್ಷಕರು ಸೇರಿದಂತೆ ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಈ ಕರ್ತವ್ಯಲೋಪದಿಂದ ಮಕ್ಕಳ ಭವಿಷ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ಶಾಲೆಯ ಹಾಜರಾತಿ ಪರಿಶೀಲನೆ ಮಾಡಿ ಶಾಲೆಯಿಂದ ಮಗು ಹೊರಗುಳಿದ ಸಂದರ್ಭದಲ್ಲಿ ಪರಿಶೀಲನೆ ನಡೆಸಿ ಹಾಜರಾತಿ ಪ್ರಾಧಿಕಾರಕ್ಕೆ ತಿಳಿಸಬೇಕು. ಮಗುವಿನ ಕೌಟುಂಬಿಕೆ ಹಿನ್ನೆಲೆ ವಿಚಾರಿಸಬೇಕು. ಆರ್ಥಿಕ ಸಮಸ್ಯೆಯಿಂದ ಬಳಲುತ್ತಿರುವ ಮಗು ಶಾಲೆಯಿಂದ ದೀರ್ಘಕಾಲದವರೆಗೆ ಹೊರಗುಳಿದ ಸಂದರ್ಭದಲ್ಲಿ ಬಾಲಕಾರ್ಮಿಕತೆ, ಅನೈತಿಕ ಚಟುವಟಿಕೆ, ಬಾಲ್ಯ ವಿವಾಹ ಮುಂತಾದ ಘಟನೆಗಳು ಸಂಭವಿಸಬಹುದಾಗಿವೆ. 2016ರ ಮಕ್ಕಳ ರಕ್ಷಣಾ ನೀತಿಯನ್ನು ಪಾಲಿಸುವುದು ಕಡ್ಡಾಯವಾಗಿದೆ. ಶಾಲಾ ಫಲಕದಲ್ಲಿ ಮಕ್ಕಳ ಸಹಾಯವಾಣಿ ಅಳವಡಿಸುವುದು, ಶಾಲೆಯಲ್ಲಿ ಮಕ್ಕಳ ಸಲಹಾಪೆಟ್ಟಿಗೆ ಇಡುವುದರಿಂದ ಮಕ್ಕಳ ರಕ್ಷಣಾ ನೀತಿ ಅನುಸರಿಸಿ ಶಾಲೆಯಲ್ಲಿ ಸಂಭವಿಸಬಹುದಾದ ಅವಘಡಗಳನ್ನು ತಪ್ಪಿಸಬಹುದಾಗಿದೆ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಪದ್ಮಾವತಿ ಜಿ ಮಾತನಾಡಿ, ಶಾಲೆಯಿಂದ ಹೊರಗುಳಿದ ಮಕ್ಕಳ ಬಾಲ್ಯ ವಿವಾಹ ಹಾಗೂ ಬಾಲ ಗರ್ಭಿಣಿ ಪ್ರಕರಣಗಳು ಕಂಡುಬಂದಿರುವುದು ಆತಂಕಕಾರಿ ವಿಷಯವಾಗಿವೆ. ಮಕ್ಕಳು ಶಾಲೆಗೆ ಅನಧಿಕೃತ ಗೈರು ಆಗದಿರುವಂತೆ ಶಿಕ್ಷಕರು ನೋಡಿಕೊಳ್ಳಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರಿಂದ ಅವರ ಭವಿಷ್ಯ ಉಜ್ವಲಗೊಳಿಸಬಹುದಾಗಿದೆ ಎಂದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಅಧ್ಯಕ್ಷತೆ ವಹಿಸಿ ಮಾತನಾಡಿ, ಈ ಅರ್ಥಪೂರ್ಣ ಕಾರ್ಯಕ್ರಮದ ಸದುಪಯೋಗ ಎಲ್ಲರೂ ಪಡೆದುಕೊಳ್ಳಬೇಕು. ಮಕ್ಕಳ ರಕ್ಷಣೆ ಕುರಿತು ಅನೇಕ ಕಾನೂನು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಬಾಲ್ಯ ವಿವಾಹದಂತಹ ಅನಿಷ್ಟ ಪದ್ಧತಿಗಳನ್ನು ಮಟ್ಟಹಾಕಲು ವಿವಿಧ ಇಲಾಖೆಗಳು ಕ್ರಮ ಜರುಗಿಸಬೇಕಾಗಿದೆ ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಎಲ್ಲ ಶಾಲೆಗಳಲ್ಲಿ ಮಕ್ಕಳ ರಕ್ಷಣಾ ನೀತಿಯ ಪಾಲನೆಯಾಗಬೇಕು. ಶಾಲೆಗೆ ಹಾಜರಾದ ಮಗು ಅರ್ಥಪೂರ್ಣ ಕಲಿಕಾ ಅವಧಿ ಪೂರ್ಣಗೊಳಿಸಬೇಕು. ಶಾಲೆಗೆ ಮಕ್ಕಳನ್ನು ಕಡ್ಡಾಯವಾಗಿ ಕಳುಹಿಸುವುದು ಪಾಲಕರ ಜವಾಬ್ದಾರಿಯೂ ಆಗಿದೆ. ಶಾಲೆಯಲ್ಲಿ ಮಗುವಿಗೆ ಕಲಿಕಾ ಅವಧಿಯಲ್ಲಿ ಸಂತಸದಾಯಕ ವಾತಾವರಣ ನಿರ್ಮಾಣವಾಗಬೇಕು ಎಂದು ತಿಳಿಸಿದರು.

▸▸ 2ನೇ ಪುಟಕ್ಕೆ

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಕುಂದುಕೊರತೆ ಸಭೆಯಲ್ಲಿ ಎಸ್‌ಪಿ ಬಿ.ಎಸ್. ನೇಮಗೌಡ

ಗದಗ 'ಅಪರಾಧ ಮುಕ್ತ ಜಿಲ್ಲೆ'ಯಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮನುಷ್ಯ ಸಮಾಜ ಜೀವಿಯಾಗಿದ್ದು, ಎಲ್ಲ ಸಮುದಾಯದವರು ಇತರೇ ಸಮಾಜದೊಂದಿಗೆ ಪರಸ್ಪರ ಸ್ನೇಹ, ಸೌಹಾರ್ದತೆ, ಮಾನವೀಯತೆಯೊಂದಿಗೆ ಬಾಳಬೇಕು ಎಂದು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಹೇಳಿದರು.

ಅವರು ಪಟ್ಟಣದ ಪೊಲೀಸ್ ಠಾಣೆಯಲ್ಲಿ ಮಂಗಳವಾರ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಕುಂದುಕೊರತೆ ಸಭೆ ಉದ್ದೇಶಿಸಿ ಮಾತನಾಡಿದರು.

ಗದಗ ಜಿಲ್ಲೆ ಕೋಮು ಸೌಹಾರ್ದತೆಗೆ ಸಾಕ್ಷಿಯಾಗಿದ್ದು, ಅಪರಾಧ ಮುಕ್ತ ಜಿಲ್ಲೆಯಾಗಬೇಕು ಮತ್ತು ಸಾರ್ವಜನಿಕರು ನೆಮ್ಮದಿಯ ಜೀವನ ನಡೆಸಬೇಕು. ಪಟ್ಟಣ ಸೇರಿ ಗ್ರಾಮೀಣ ಭಾಗದಲ್ಲಿ ನಡೆಯುವ ಸಣ್ಣಪುಟ್ಟ ಸಮಸ್ಯೆಗಳ ಪರಿಹಾರಕ್ಕಾಗಿ ಅಧಿಕಾರಿಗಳೇ ನೇರವಾಗಿ ಹೋಗಿ ಮಾತುಕತೆಯೊಂದಿಗೆ ಬಗೆಹರಿಸಬೇಕು. ಇದಕ್ಕೆ ಆಯಾ ಸಮಾಜದ ಮುಖಂಡರ ಸಹಕಾರ ಅಗತ್ಯವಾಗಿದೆ. ಜಿಲ್ಲೆಯಲ್ಲಿ ಕಳ್ಳತನ ಸೇರಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಜಿಲ್ಲೆಯಾದ್ಯಂತ ಸಿಸಿ ಕ್ಯಾಮೆರಾ ಅಳವಡಿಸಲಾಗಿದೆ. ಲಕ್ಷ್ಮೇಶ್ವರಕ್ಕೆ ಸಂರ್ಕಿಸುವ ರಸ್ತೆಯಲ್ಲಿ ಸಿಸಿ ಕ್ಯಾಮೆರಾ ಅಳವಡಿಸಲಾಗಿದ್ದು, ಅಪರಾಧ ತಡೆಗೆ ಸಾರ್ವಜನಿಕರ ಸಹಕಾರ ಬಹಳ ಮುಖ್ಯ. ಕಳೆದ ವರ್ಷದಿಂದ ಥರ್ಡ್ ಐ ಕ್ಯಾಮೆರಾ ಅಳವಡಿಸಿದ ಮೇಲೆ ಜಿಲ್ಲೆಯಲ್ಲಿ ಕಳ್ಳತನ ಪ್ರಕರಣಗಳು ಕಡಿಮೆಯಾಗಿವೆ ಮತ್ತು ಪತ್ತೆ ಹಚ್ಚಲು ಸಹಾಯಕವಾಗಿವೆ ಎಂದರು.

ಈ ಸಂದರ್ಭದಲ್ಲಿ ಜಯಮ್ಮ ಕಳ್ಳಿ, ಸುರೇಶ ನಂದೆಣ್ಣವರ, ಪಿ.ಬಿ. ಕರಾಟೆ, ಫಕ್ಕೀರೇಶ ಮ್ಯಾಟಣ್ಣವರ, ರಾಮಣ್ಣ ಲಮಾಣಿ (ಶಿಗ್ಲಿ), ಯಲ್ಲಪ್ಪ ತಳವಾರ, ಎನ್. ಆರ್. ಸಾತಪುತೆ, ಜಗದೀಶ ಹುಲಿಗೆಮ್ಮನವರ, ಟಾಕಪ್ಪ ಸಾತಪುತೆ, ಕೆ.ಓ. ಹುಲಿಕಟ್ಟಿ, ಕಾರ್ತಿಕ ದೊಡ್ಡಮನಿ, ಮಲ್ಲೇಶ ಮಣ್ಣಮ್ಮನವರ, ಮಂಜುನಾಥ ಶೀತಮ್ಮನವರ, ಫಕ್ಕೀರೇಶ ಭಜಕ್ಕನವರ, ಸಂತೋಷ ನಂದೆಣ್ಣವರ, ಸಂತೋಷ ಹಾದಿಮನಿ, ಪರಮೇಶ ಹಳೇರಿತ್ತಿ, ಹನುಮಪ್ಪ ಹರಿಜನ, ಮಹಾಂತೇಶ, ಮುಶೆಪ್ಪನವರ ಸೇರಿದಂತೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮುಖಂಡರು ಇದ್ದರು.

ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ನಾಗರಾಜ ಗಡದ, ಅಪರಾಧ ವಿಭಾಗದ ಪಿಎಸ್‌ಐ ಟಿ.ಕೆ. ರಾಠೋಡ ಹಾಗೂ ಪೊಲೀಸ್ ಸಿಬ್ಬಂದಿಗಳು ಇದ್ದರು.

ಎಸ್‌ಸಿ/ಎಸ್ಟಿ ಸಮುದಾಯದ ಮುಖಂಡರು ಮಾತನಾಡಿ, ಕೆಲವು ಗ್ರಾಮಗಳ ಹೋಟೆಲ್, ಕ್ಷೌರದ ಅಂಗಡಿಗಳಲ್ಲಿ ಸಮುದಾಯದ ಜನರಿಗೆ ಮೀನಾಮೇಷ ಮಾಡುತ್ತಿದ್ದಾರೆ. ಸಮುದಾಯದ ಜನರಿಗೆ ಸ್ಮಶಾನ ಭೂಮಿ ಸಮಸ್ಯೆಯಿದೆ. ಇರುವ ಸರ್ಕಾರದ ಯೋಜನೆ, ಸೌಲಭ್ಯಗಳು ಸಂಬಂಧಪಟ್ಟ ಅಧಿಕಾರಿಗಳಿಂದ ತಿಳಿಸುವ ಕಾರ್ಯವಾಗುತ್ತಿಲ್ಲ ಎಂದರು.

ತಾಲೂಕಾ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಶಾಸಕ ಜಿ.ಎಸ್. ಪಾಟೀಲ

ಕನ್ನಡದ ಕಂಪು ಹರಡುತ್ತಿರುವುದು ನಮ್ಮೆಲ್ಲರ ಸೌಭಾಗ್ಯ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಫೆ. 20ರಂದು ನಿಡಗುಂದಿಕೊಪ್ಪದಲ್ಲಿ ಪೂಜ್ಯ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು ಏರ್ಪಡಿಸಲು ಉದ್ದೇಶಿಸಿರುವ ಗಜೇಂದ್ರಗಡ ಪ್ರಥಮ ತಾಲೂಕಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ತಾವು ಸಂಪೂರ್ಣ ಸಹಕಾರ ನೀಡುವುದಾಗಿ ಶಾಸಕ ಜಿ.ಎಸ್. ಪಾಟೀಲ ಘೋಷಿಸಿದರು.

ಸಮೀಪದ ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದ ಮಠದಲ್ಲಿ ನಡೆದ ಸಮ್ಮೇಳನದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇವಲ ಹದಿನೈದು ದಿನಗಳ ಹಿಂದೆ ಜಿಲ್ಲಾ ಸಮ್ಮೇಳನವನ್ನು ಜರುಗಿಸಿ ಯಶಸ್ವಿಗೊಳಿಸಿದ್ದೇವೆ. ಪೂಜ್ಯರ ಆಸೆಯಂತೆ ತಾಲೂಕಾ ಸಮ್ಮೇಳನ ನಡೆಸಲು ಪುನಃ ಜಿಲ್ಲಾ ಕಸಾಪ ಘಟಕ ಮತ್ತು ತಾಲೂಕು ಘಟಕಗಳು ಸಜ್ಜಾಗಿರುವುದು ವಿಶೇಷ ಆನಂದವನ್ನುಂಟು ಮಾಡಿದೆ. ಈ ಮೂಲಕ ತಾಲೂಕಿನಲ್ಲಿ ಕನ್ನಡದ ಕಂಪು ಹರಡುತ್ತಿರುವುದು ನಮ್ಮೆಲ್ಲರ ಸೌಭಾಗ್ಯ ಎಂದು ಹೇಳಿದರು.

ಈ ಮಠವು ಲೌಕಿಕದ ಭವರೋಗವನ್ನು ಕಳೆಯುವದರ ಜೊತೆಗೆ ಈಗ ಅಕ್ಷರದ ಸೇವೆಯನ್ನೂ ಮಾಡಲು ಮುಂದಾಗಿರುವುದು ಶ್ಲಾಘನೀಯ ಕಾರ್ಯ. ಶ್ರೀ ಕುಮಾರೇಶ್ವರರ ಜಾತ್ರಾ ಮಹೋತ್ಸವವನ್ನು ನೆಪವಾಗಿಟ್ಟುಕೊಂಡು ಪ್ರಪ್ರಥಮ ತಾಲೂಕಾ ಸಮ್ಮೇಳನ ನಡೆಸಲು ಮುಂದಾಗಿರುವ ಪೂಜ್ಯ ಅಭಿನವ ಚನ್ನಬಸವ ಮಹಾಸ್ವಾಮಿಗಳ ದೃಢ ನಿರ್ಧಾರಕ್ಕೆ ನಾವೆಲ್ಲರೂ ತಲೆ ಬಾಗಿದ್ದೇವೆ ಎಂದು ಶಾಸಕ ಜಿ.ಎಸ್. ಪಾಟೀಲ ನುಡಿದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಆದ್ಯಾತ್ಮಿಕ ಜಾತ್ರೆಯ ಜೊತೆಗೆ ಅಕ್ಷರ ಜಾತ್ರೆಯನ್ನು ನೆರವೇರಿಸಲು ಮುಂದಾಗಿರುವ ಶ್ರೀಗಳ ನಿರ್ಧಾರ ಸ್ವಾಗತಾರ್ಹ. ಜಾತ್ರೆಯನ್ನು ಈ ರೀತಿ ವಿಶೇಷ ವಿಧಾಯಕ ಕಾರ್ಯಕ್ರಮಗಳ ಮೂಲಕ ಆಚರಿಸಿದರೆ ಅದಕ್ಕೊಂದು ಔಚಿತ್ಯತೆ ಬರುತ್ತದೆ. ಎಲ್ಲ ಸ್ವಾಮೀಜಿಗಳೂ ಇಂತಹ ಕಾರ್ಯಕ್ಕೆ ಮುಂದಾಗಬೇಕೆಂದು ಹೇಳಿದ ಪಾಟೀಲ, ತಾಲೂಕಾ ಸಮ್ಮೇಳನಕ್ಕೆ ಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ, ಮೂಲ ಪೀಠಾಧ್ಯಕ್ಷರಾದ ಚನ್ನಬಸವ ಮಹಾಸ್ವಾಮಿಗಳಿಗೆ ಮತ್ತು ಹಿಂದಿನ ಪೀಠಾಧಿಪತಿಗಳಾದ ಶಿವಬಸವ ಮಹಾಸ್ವಾಮಿಗಳವರಿಗೆ ಇಲ್ಲಿ ಅಕ್ಷರ ಜಾತ್ರೆ ನಡೆಯಬೇಕೆಂಬ ಆಸೆಯಾಗಿದೆ. ಅದನ್ನು ಈಗಿನ ಶ್ರೀಗಳ ಮೂಲಕ ಈಡೇರಿಸಲು ಅವರು ಮುಂದಾಗಿರುವುದು ಸಂತಸಕರ ಎಂದರು.

ಸಾಹಿತಿ ಎಸ್.ಎಫ್. ಕರಿದುರಗನವರ ಮಾತನಾಡಿ, ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು, ಎಲ್ಲರಿಗೂ ಸಮನಾದ ಅವಕಾಶ ನೀಡಿ ಈ ಸಮ್ಮೇಳನವನ್ನು ಯಶಸ್ವಿಗೊಳಿಸೋಣ. ಯಾರಿಗೂ ಅಸಮಾಧಾನವಾಗದಂತೆ ಪ್ರಥಮ ಸಮ್ಮೇಳನದ ಯಶಸ್ಸಿಗೆ ಶ್ರಮಿಸೋಣ ಎಂದರು. ಆಶೀರ್ವಚನ ನೀಡಿದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು, ನಮ್ಮ ಹಿರಿಯ ಗುರುಗಳ ಅಣತಿಯಂತೆ ಸಮ್ಮೇಳನ ಮಾಡಲು ನಿರ್ಧರಿಸಿದ್ದೇವೆ.

ಇದಕ್ಕೆ ಎಲ್ಲರ ಸಹಕಾರ ಜೊತೆಗೆ ಸಹಾಯವೂ ಬೇಕು. ನಮ್ಮೊಂದಿಗೆ ಶಾಸಕರಿರುವುದು ನಮಗೆ ಇನ್ನಿಲ್ಲದ ಬಲವನ್ನು ತುಂಬಿದೆ ಎಂದು ತಿಳಿಸಿದರು.

ವೇದಿಕೆಯ ಮೇಲೆ ತಾಲೂಕಾಧ್ಯಕ್ಷ ಅಮರೇಶ ಗಾಣಿಗೇರ, ಹೋಬಳಿ ಅಧ್ಯಕ್ಷ ಎಂ.ವಿ. ವೀರಾಪೂರ, ವೀರಣ್ಣ ಶೆಟ್ಟರ, ವಿ.ಬಿ. ಸೋಮನಕಟ್ಟಿಮಠ, ಡಾ. ಕೆ.ಬಿ. ಧನ್ನೂರ, ಕಿಶೋರಬಾಬು ನಾಗರಕಟ್ಟಿ, ಶರಣಪ್ಪ ಬೆಟಗೇರಿ, ಎಸ್.ಎಸ್. ಪಸಾರದ, ಎಂ.ಎ. ಹಾದಿಮನಿ, ಮಂಜುಳಾ ರೇವಡಿ, ಅಂದಪ್ಪ ಬಿಚ್ಚೂರ ಮುಂತಾದವರಿದ್ದರು. ಶಿಕ್ಷಕ ಡಿ.ಎಸ್. ಬಡಿಗೇರ ಸ್ವಾಗತಿಸಿ ನಿರೂಪಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ಫೆಬ್ರವರಿ 5 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಈ ಕೆಳಗಿನಂತಿದೆ.

ಫೆಬ್ರವರಿ 5 ರಂದು ಸಾಯಂಕಾಲ 5 ಗಂಟೆಗೆ ಗದಗಗೆ ಆಗಮಿಸಿ ನಗರದ ತೋಂಟದಾರ್ಯ ಮಠದಲ್ಲಿ ಸದ್ಗುರು ಶ್ರೀ ಸಿದ್ಧಾರೂಢರ ದಿವ್ಯಜ್ಯೋತಿ ಸ್ವಾಗತ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ನಂತರ ಸಾಯಂಕಾಲ 6 ಗಂಟೆಗೆ ಗಜೇಂದ್ರಗಡ ತಾಲೂಕು ನರೇಗಲ್ ಪಟ್ಟಣದಲ್ಲಿ ಜರುಗುವ ಕೋಡಿಕೊಪ್ಪದ ಹಠಯೋಗಿ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವ ಹಾಗೂ ಜಾತ್ರೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ನಂತರ ಅಲ್ಲಿಂದ ರಸ್ತೆ ಮಾರ್ಗವಾಗಿ ಹುಬ್ಬಳ್ಳಿಗೆ ತೆರಳಿ, ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು ಎಂದು ಸಚಿವರ ಕಚೇರಿಯ ಪ್ರಕಟಣೆ ತಿಳಿಸಿದೆ.

ಮಕ್ಕಳ ರಕ್ಷಣಾ ನೀತಿಯನ್ನು ಕಡ್ಡಾಯವಾಗಿ ಪಾಲಿಸಿ

▶▶ಮೊದಲನೇ ಪುಟದಿಂದ

ಇದೇ ಸಂದರ್ಭದಲ್ಲಿ ಮಕ್ಕಳ ಸಹಾಯವಾಣಿ ಕುರಿತು ಪೋಸ್ಟರ್‌ನ್ನು ಬಿಡುಗಡೆ ಮಾಡಲಾಯಿತು. ಸಂಪನ್ಮೂಲ ವ್ಯಕ್ತಿಗಳಾದ ಬಿ.ಎನ್. ಸಂಶಿ ಆರ್.ಟಿ.ಇ ಕಾಯ್ದೆ, ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕುರಿತು ಮಾತನಾಡಿದರು. ಜ್ಯೋತಿ ಭ್ರೂಣಲಿಂಗ ಪತ್ತೆ ನಿಷೇಧ ಕಾಯ್ದೆ ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಿವೈಎಸ್‌ಪಿ ಇನಾಮದಾರ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಜಯಶ್ರೀ ಕವಲೂರ, ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಡಿ.ಐ. ಈರಗಾರ, ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಎಂ.ವಿ. ಗೋಡೇಕರ್ ಪ್ರಾರ್ಥಿಸಿದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರು ಸ್ವಾಗತಿಸಿದರು. ರಮೇಶ ಕಳ್ಳಿಮನಿ ವಂದಿಸಿದರು. ಮಲ್ಲಪ್ಪ ಹೊಸಳ್ಳಿ ಕಾರ್ಯಕ್ರಮ ನಿರ್ವಹಿಸಿದರು.

ಸಂತ ಸೇವಾಲಾಲ್ ಜಯಂತಿ ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈ ವರ್ಷವು ದಿನಾಂಕ:15.02.2025 ರಂದು ಆಚರಿಸಲಾಗುವ ಶ್ರೀ ಸಂತ ಸೇವಾಲಾಲ್ ಜಯಂತಿ ನಿಮಿತ್ತ ಫೆಬ್ರವರಿ 05 ರಂದು ಸಾಯಂಕಾಲ 4.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಸಭೆಗೆ ಸಮಾಜದ ಮುಖಂಡರು ಅಭಿಮಾನಿಗಳು ಹಾಜರಾಗಿ ಸೂಕ್ತ ಸಲಹೆ, ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ, ಮುಂಡರಗಿ ಮತ್ತು ರೋಣ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2025-26ನೇ ಸಾಲಿಗೆ 6ನೇ ತರಗತಿ ದಾಖಲಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ಇದರಲ್ಲಿ 75% ರಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಹಾಗೂ 25% ರಷ್ಟು ಇತರೇ ವರ್ಗದವರಿಗೆ ವಿತರಿಸಲಾಗುವುದು.

ಅಂಗವಿಕಲ ವಿದ್ಯಾರ್ಥಿಗಳು, ವಿಶೇಷ ಗುಂಪಿಗೆ ಸೇರಿದ ಅಂದರೆ ಅನಾಥ ಮಕ್ಕಳು, ವಿಧವೆಯರ ಮಕ್ಕಳು, ಪೌರ ಕಾರ್ಮಿಕರ ಮಕ್ಕಳು ಇತ್ಯಾದಿಗಳಿಗೆ 3% ರಷ್ಟು ಆಸನಗಳನ್ನು ಕಾಯ್ದಿರಿಸಲಾಗಿದೆ.

6ನೇ ತರಗತಿಗೆ ದಾಖಲಾತಿ ಬಯಸುವ ವಿದ್ಯಾರ್ಥಿಗಳು 5ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರಬಾರದು, ಅರ್ಜಿಗಳನ್ನು ಆನ್‌ಲೈನ್ ಃಣಣಠಿ://ಜತಭಟಿಜಷಣ.ಇಚಿಡಿ-ಟಿಚಿಣಚಿಞಚಿ.ರಠತ.ಏಟಿ (ಸೇವಾಸಿಂಧೂ) ಮೂಲಕ ಮಾರ್ಚ್ 10 ರೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

ಈ ಕೆಳಕಂಡ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದಾಗಿದೆ.

08371-262911 ತಾಲೂಕ ಪಂಚಾಯತಿ ಆವರಣ, ಮುಂಡರಗಿ; 08372-297494 ಮೌಲಾನಾ ಆಝಾದ್ ಭವನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ; 08381-267258 ತಾಲೂಕ ಪಂಚಾಯತಿ ಆವರಣ, ರೋಣ; 08377-245411 ತಹಸೀಲ್ದಾರ್ ಕಾರ್ಯಾಲಯ ರೂ.ನಂ:20, ನರಗುಂದ; 08487-242810 ತಾಲೂಕ ಉಪ ಖಜಾನೆ ಆವರಣ, ಶಿರಹಟ್ಟಿ.

ಮ.ನಿ.ಪ್ರ. ಕರಿವೃಷಭದೇಶಿಕೇಂದ್ರ ಶಿವಯೋಗೀಶ್ವರ ಮಹಾಸ್ವಾಮಿಗಳವರ
ಗುರುವಂದನಾ ಕಾರ್ಯಕ್ರಮ

ಗದಗ: ವಿಜಯವಾಣಿ ದಿನಪತ್ರಿಕೆಯ ಜಿಲ್ಲಾ ವರದಿಗಾರ ಮತ್ತು ನೊಣವಿನಕೇರಿ ಮಠದ ವಿದ್ಯಾ ಸಂಸ್ಥೆಯ ಹಳೆಯ ವಿದ್ಯಾರ್ಥಿ ಶಿವಾನಂದ ಹಿರೇಮಠ ಅವರನ್ನು ಸೋಮವಾರ ನೊಣವಿನಕೇರಿ ಮಠದ ಕಾರ್ಯಕ್ರಮದಲ್ಲಿ ಕಾಡಸಿದ್ದೇಶ್ವರ ಶ್ರೀ ಗೌರವ ಶ್ರೀರಕ್ಷೆ ನೀಡಿ ಗೌರವಿಸಲಾಯಿತು. ಶ್ರೀಮಠದ ಕರಿವೃಷಭ ದೇಶೀಕೇಂದ್ರ ಮಹಾಸ್ವಾಮಿಗಳು, ಅಭಿನವ ಕಾಡಸಿದ್ದೇಶ್ವರ ಶ್ರೀಗಳು, ಶಿಕ್ಷಕ ಸಿಬ್ಬಂದಿ ಇದ್ದರು.

2024-2025ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮದಲ್ಲಿ ಆರ್.ಎಸ್.ಬುರಡಿ

ಮಕ್ಕಳ ಪ್ರಗತಿಗೆ ಶಿಕ್ಷಣ ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಮಗುವಿನ ಸರ್ವತೋಮುಖ ಅಭಿವೃದ್ಧಿಗೆ ಗುರುಗಳು ಮಾತ್ರವಲ್ಲದೇ ಅವರ ಪಾಲಕರೂ ಪ್ರಮುಖ ಪಾತ್ರ ವಹಿಸುತ್ತಾರೆ. ಮಕ್ಕಳ ಸೃಜನಶೀಲತೆಗೆ ಮತ್ತು ಪ್ರಗತಿಗೆ ಶಿಕ್ಷಣ ಅತೀ ಅವಶ್ಯ. ಅಲ್ಲದೆ ಮಕ್ಕಳೂ ಕೂಡ ತಮ್ಮ ಜೀವನದಲ್ಲಿ ಗುರುವಿನ ಸಹಕಾರದಿಂದ ಗುರಿ ಸೇರುವ ಪ್ರಯತ್ನದಲ್ಲಿ ಸದಾ ತೊಡಗಿರಬೇಕು ಎಂದು ಗದಗ ಜಿಲ್ಲಾ ಶಾಲಾ ಶಿಕ್ಷಣ ಉಪನಿರ್ದೇಶಕರಾದ ಆರ್.ಎಸ್. ಬುರಡಿ ಸಲಹೆ ನೀಡಿದರು.

ಅವರು ಬೆಟಗೇರಿಯ ಎಸ್.ಎಸ್.ಕೆ. ಶ್ರೀ ಜಗದಂಬಾ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಮಿಸ್ಸೆಸ್ ಲೀಲಾಬಾಯಿ ನಾರಾಯಣಸಾ ಬದಿ ಪ್ರೌಢಶಾಲೆ ಬೆಟಗೇರಿಯಲ್ಲಿ ಜರುಗಿದ 2024-2025ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಪಾರಿತೋಷಕ ವಿತರಣಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಗದುಗಿನ ಗಣ್ಯ ವ್ಯಾಪಾರಿಗಳು ಹುಲಕೋಟಿ ಎಜುಕೇಷನ್ ಸೊಸೈಟಿಯ ಪದವಿ ಕಾಲೇಜಿನ ಚೇರಮನ್ ರಾಮಚಂದ್ರಸಾ ಕೆ.ಹಬೀಬ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಗುರುವಿನ ಪಾತ್ರ ಬಹುಮುಖ್ಯವಾಗಿದೆ. ಅವರೊಂದಿಗೆ ಮಕ್ಕಳು ಕೂಡ ಅದೇ ನಿಟ್ಟಿನಲ್ಲಿ ಗುರುವನ್ನು ಆದರದಿಂದ ಕಾಣಬೇಕು ಎಂದರಲ್ಲದೆ, ಪಠ್ಯ ವಿಷಯವಲ್ಲದೇ ಪಠ್ಯೇತರ ವಿಷಯಗಳಲ್ಲಿಯೂ ಕೂಡ ಮಕ್ಕಳು ಭಾಗವಹಿಸಿದ್ದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಸ್ಥೆಯ ಚೇರಮನ್ ಜಿ.ವಿ. ಬಸವಾ, ವೈಸ್ ಚೇರಮನ್ ದತ್ತು ಉ.ಪವಾರ, ಎಸ್.ಎಸ್.ಕೆ. ತರುಣ ಸಂಘದ ಅಧ್ಯಕ್ಷ ಶ್ರೀಕಾಂತ ಬಿ.ರಾಯಬಾಗಿ, ಶ್ರೀ ಜಗದಂಬಾ ಮಹಿಳಾ ಮಂಡಳದ ಅಧ್ಯಕ್ಷೆ ಸರೋಜಾಬಾಯಿ ಎಚ್.ಕಬಾಡಿ, ಮುಖ್ಯೋಪಾಧ್ಯಾಯರಾದ ಎಸ್.ಡಿ. ಬೆನಕಲ್ ಹಾಗೂ ಸಿ.ಎಸ್. ಹವಳದ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಸಂಸ್ಥೆಯ ಚೇರಮನ್ ಜಿ.ವ್ಹಿ. ಬಸವಾ ಸ್ವಾಗತಿಸಿ ಪರಿಚಯಿಸಿದರು. ವೈಸ್ ಚೇರಮನ್ ದತ್ತು ಪವಾರ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಎಸ್.ಡಿ. ಬೆನಕಲ್ ವಾರ್ಷಿಕ ವರದಿ ವಾಚನ ಮಾಡಿದರು. ಸಮಾರಂಭದ ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಸಹ ಶಿಕ್ಷಕಿ ಮಮತಾ ನಡುವಿನಮನಿ ಹಾಗೂ ಸವಿತಾ ಹುಲ್ಲಣ್ಣವರ ಕಾರ್ಯಕ್ರಮ ನಿರೂಪಿಸಿದರು. ಪೂಜಾ ಪಾಟೀಲ ಮಾಲಾರ್ಪಣೆಯನ್ನು ಹಾಗೂ ಬಹುಮಾನ ವಿತರಣೆಯನ್ನು ಅಖಿಲಾ ಚುರ್ಚಪ್ಪನವರು ನಡೆಸಿಕೊಟ್ಟರು. ಆರ್.ಪಿ. ನದಾಫ್ ವಂದಿಸಿದರು.

ಈ ಸಂದರ್ಭದಲ್ಲಿ ಎಸ್.ಎಸ್.ಕೆ. ಸಮಾಜ ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ, ಮಹಿಳಾ ಮಂಡಳ ಹಾಗೂ ಮಕ್ಕಳ ಪೋಷಕರು ಪಾಲ್ಗೊಂಡಿದ್ದರು.

ಅಧ್ಯಕ್ಷತೆ ವಹಿಸಿದ್ದ ಲೋಕನಾಥ ಬಿ.ಕಬಾಡಿ ಮಾತನಾಡಿ, ಸಂಸ್ಥೆಯ ಏಳ್ಗೆಯಲ್ಲಿ ಶಿಕ್ಷಕ ವೃಂದದ ಹಾಗೂ ಸಮಾಜದ ದಾನಿಗಳ ಪಾತ್ರ ಬಹು ಮಹತ್ವದ್ದಾಗಿದೆ. ನಮ್ಮ ಶಾಲೆಯ ಮಕ್ಕಳು ಇತರೆ ಅನೇಕ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆದಿದ್ದು ಹೆಮ್ಮೆ ಮೂಡಿಸಿದೆ ಎಂದರು.

ಗಾಝಾ ಕದನ ವಿರಾಮ ಮುಂದುವರಿಯುವ ಗ್ಯಾರಂಟಿ ಇಲ್ಲ: ಟ್ರಂಪ್

■ವಿಜಯಸಾಕ್ಷಿ ಸುದ್ದಿ, ವಾಷಿಂಗ್ಟನ್

ಮುಂದಿನ ಗುರುವಾರ (ಫೆ.6) ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ವಾಷಿಂಗ್ಟನ್ ಡಿಸಿಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿ ಮಾಡಲಿದ್ದಾರೆ.

ಟ್ರಂಪ್ ಎರಡನೇ ಬಾರಿಗೆ ಅಧಿಕಾರ ವಹಿಸಿಕೊಂಡ ಬಳಿಕ, ಅವರನ್ನು ಭೇಟಿಯಾಗುತ್ತಿರುವ ಮೊದಲ ವಿದೇಶ ನಾಯಕ ನೆತನ್ಯಾಹು ಆಗಿದ್ದಾರೆ.

ನೆತನ್ಯಾಹು ಭೇಟಿಯ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿರುವ ಟ್ರಂಪ್, “ಗಾಝಾ ಕದನ ವಿರಾಮ ಮುಂದುವರಿಯುವ ಯಾವುದೇ ಗ್ಯಾರಂಟಿ ನನಗಿಲ್ಲ” ಎಂದಿದ್ದಾರೆ.

ವಿವಿಧ ಷರತ್ತುಗಳನ್ನು ಒಳಗೊಂಡ ಹಮಾಸ್ ಮತ್ತು ಇಸ್ರೇಲ್ ನಡುವಿನ ಕದನ ವಿರಾಮ ಒಪ್ಪಂದ ಜನವರಿ 16, 2025ರಿಂದ ಜಾರಿಗೆ ಬಂದಿದೆ. ಅದರ ಮೊದಲ ಹಂತವಾಗಿ ಪರಸ್ಪರ ಬಂಧಿತರು, ಒತ್ತೆಯಾಳುಗಳ ಬಿಡುಗಡೆ ಯಶಸ್ವಿಯಾಗಿ ನಡೆಯುತ್ತಿದೆ. ಶಿಬಿರಗಳಲ್ಲಿ ಇದ್ದ ಲಕ್ಷಾಂತರ ಜನರು ಉತ್ತರ ಗಾಝಾಗೆ ಮರಳುತ್ತಿದ್ದಾರೆ.

ಈ ನಡುವೆ ಕದನ ವಿರಾಮ ವಿಫಲಗೊಳ್ಳುವ ಬಗ್ಗೆ ಟ್ರಂಪ್ ಮಾತನಾಡಿರುವುದು ಆತಂಕ್ಕೆ ಕಾರಣವಾಗಿದೆ. ಏಕೆಂದರೆ, ಗಾಝಾದಲ್ಲಿ ಇಸ್ರೇಲ್ ಆಕ್ರಮಣ ನಡೆಸಲು ಎಲ್ಲಾ ರೀತಿಯ ಸಹಾಯಗಳನ್ನು ಒದಗಿಸಿರುವುದು ಇದೇ ಅಮೆರಿಕವಾಗಿದೆ.

ಈ ಹಿಂದೆ ಜೋ ಬೈಡೆನ್ ಅಮೆರಿಕದ ಅಧ್ಯಕ್ಷರಾಗಿದ್ದಾಗ ಮಾಧ್ಯಮಗಳ ಮುಂದೆ ಗಾಝಾ ಆಕ್ರಮಣವನ್ನು ಖಂಡಿಸುತ್ತಿದ್ದರು. ಜೀವ ಹಾನಿಯ ಬಗ್ಗೆ ಮೊಸಳೆ ಕಣ್ಣೀರು ಸುರಿಸುತ್ತಿದ್ದರು. ಆದರೆ, ಹಿಂಬದಿಯಲ್ಲಿ ಇಸ್ರೇಲ್‌ಗೆ ಬೇಕಾದ ಮದ್ದು, ಗುಂಡು ಶಸ್ತ್ರಾಸ್ತ್ರಗಳನ್ನು ಪೂರೈಸುತ್ತಿದ್ದರು.

ಜಿಲ್ಲಾಡಳಿತ ಭವನದಲ್ಲಿ ಸವಿತಾ ಮಹರ್ಷಿ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಸವಿತಾ ಮಹರ್ಷಿ ಜಯಂತಿಯನ್ನು ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸುವ ಮೂಲಕ ಆಚರಿಸಲಾಯಿತು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ತಾಲೂಕ ಗ್ಯಾರಂಟಿ ಸಮಿತಿ ಸದಸ್ಯ ಕೃಷ್ಣಗೌಡ ಎಚ್ ಪಾಟೀಲ, ಜಿ.ಪಂ.ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ.ಸಂಕದ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ, ಖಜಾನೆ ಇಲಾಖೆ ಉಪ ನಿರ್ದೇಶಕ ಹರಿನಾಥ ಬಾಬು, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಸವಿತಾ ಮಹರ್ಷಿ ಸಮಾಜದ ಗಣ್ಯರು ಹಾಜರಿದ್ದು, ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಮರ್ಪಿಸಿದರು.

‘ಶ್ರೀ ವೀರಪ್ಪಜ್ಜನವರ ಜೀವನ ದರ್ಶನ ಪುರಾಣ’ದಲ್ಲಿ ಅಡವಿಸಿದ್ಧೇಶ್ವರ ಶ್ರೀಗಳು

ವೀರಪ್ಪಜ್ಜನವರದು ಅಪರೂಪದ ಅವತಾರ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕೋಡಿಕೊಪ್ಪದಲ್ಲಿ ಜನನ ತಾಳಿದ ಶ್ರೀ ವೀರಪ್ಪಜ್ಜನವರದು ಅಪರೂಪದ ಅವತಾರ. ಭೂಮಿಯ ಋಣ, ಮನೆತನದ ಪುಣ್ಯ ಮತ್ತು ತಂದೆ-ತಾಯಿಗಳ ಪುಣ್ಯವೂ ಸೇರಿದಾಗ ಮಾತ್ರ ಇಂತಹ ವ್ಯಕ್ತಿಗಳು ಭೂಮಿಯ ಮೇಲೆ ಅವತರಿಸಲು ಸಾಧ್ಯವಾಗುತ್ತದೆ ಎಂದು ಕೊತಬಾಳ ಅಂಕಲಿ ಮಠದ ಶ್ರೀ ಅಡವಿಸಿದ್ಧೇಶ್ವರ ಮಹಾಸ್ವಾಮಿಗಳವರು ಹೇಳಿದರು.

ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆ ಶತಮಾನೋತ್ಸವದ 4ನೇ ದಿನದ ಶ್ರೀ ವೀರಪ್ಪಜ್ಜನವರ ಜೀವನ ದರ್ಶನ ಪುರಾಣದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಶ್ರೀ ವೀರಪ್ಪಜ್ಜನವರು ಲಿಂಗೈಕ್ಯರಾಗಿ ನೂರು ವರ್ಷಗಳು ಕಳೆದರೂ ಇಂದಿಗೂ ನಾವು ಅವರನ್ನು ಸ್ಮರಿಸುತ್ತಿದ್ದೇವೆ ಎಂದರೆ ಅವರ ಆಧ್ಯಾತ್ಮಿಕ ವ್ಯಕ್ತಿತ್ವ ಎಷ್ಟು ಎತ್ತರದಲ್ಲಿತ್ತು ಎಂಬುದು ತಿಳಿದು ಬರುತ್ತದೆ. ಇಂತಹ ಮಹಿಮಾ ಪುರುಷನ ಶತಮಾನೋತ್ಸವದಲ್ಲಿ ಪಾಲ್ಗೊಂಡಿರುವುದು ನಮ್ಮೆಲ್ಲರ ಪುಣ್ಯ ವಿಶೇಷ ಎಂದರು.

ಶತಮಾನೋತ್ಸವ
ಮಹಾ ರಥೋತ್ಸವ
ಪ್ರವಚನ ನುಡಿಗಳು

ಜೋಳಿಗೆಯ ಮೂಲಕವೇ ಈ ನಾಡಿನಲ್ಲಿ ಮೊತ್ತ ಮೊದಲ ಬಾರಿಗೆ ಸಾಮೂಹಿಕ ವಿವಾಹ ನೆರವೇರಿಸಿದವರು ಕೊತಬಾಳದ ಶ್ರೀ ರಾಜಶೇಖರ ಮಹಾಸ್ವಾಮಿಗಳು. ಅಂದು ನಮ್ಮ ಮಠ ನೀಡಿದ ಈ ಯೋಜನೆಯನ್ನು ಈಗ ನಾಡಿನ ಎಲ್ಲ ಮಠಮಾನ್ಯಗಳೂ ಅಳವಡಿಸಿಕೊಂಡು ಮುನ್ನಡೆಯುತ್ತಿರುವುದು ಸಂತಸದ ಸಂಗತಿ. ಈ ಶತಮಾನೋತ್ಸವದ ಸಂದರ್ಭದಲ್ಲಿಯೂ ಸಹ ಫೆ. 6ರಂದು 5 ಜೊತೆ ಸಂಪೂರ್ಣ ಉಚಿತ ಸಾಮೂಹಿಕ ವಿವಾಹಗಳು ನಡೆಯುತ್ತಿರುವುದು ವಿಶೇಷ ಆನಂದವನ್ನುಂಟುಮಾಡಿದೆ ಎಂದು ಶ್ರೀಗಳು ಹೇಳಿದರು.

ಡಾ. ವಿಶ್ವನಾಥ ಮಹಾಸ್ವಾಮಿಗಳು ವೀರಪ್ಪಜ್ಜನವರ ಜೀವನ ದರ್ಶನ ಪುರಾಣ ಪ್ರವಚನ ನೀಡಿದರು. ಸಮಾರಂಭದಲ್ಲಿ ದಾನಿಗಳನ್ನು ಮತ್ತು ಶ್ರೀಮಠಕ್ಕೆ ನಿರಂತರ ಸೇವೆ ಸಲ್ಲಿಸಿದವರನ್ನು ಸನ್ಮಾನಿಸಲಾಯಿತು. ಧಾರವಾಡದ ಭಾಗ್ಯಶ್ರೀ ಭರತನಾಟ್ಯ ಪ್ರದರ್ಶಿಸಿದರೆ, ಗೀತಾ ಭೋಪಳಾಪೂರ ಪ್ರಾರ್ಥನಾ ಗೀತೆ ಹಾಡಿದರು. ಪ್ರಭುಸ್ವಾಮಿ ಅರವಟಗಿಮಠ ನಿರೂಪಿಸಿದರು, ಡಾ. ಎಲ್.ಎಸ್. ಗೌರಿ ಸ್ವಾಗತಿಸಿದರು.

ಸಿದ್ದನಕೊಳ್ಳದ ಧರ್ಮಾಧಿಕಾರಿ ಡಾ. ಶಿವಕುಮಾರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಭಕ್ತರು ಬೆಳೆಸಿದಾಗ ಮಾತ್ರ ಮಠ ಮತ್ತು ಸ್ವಾಮಿಗಳು ಬೆಳೆಯಲು ಸಾಧ್ಯವಾಗುತ್ತದೆ. ಹುಚ್ಚರಾಗಿದ್ದೂ ಜಗದ ಅಂಧಕಾರವನ್ನು ದೂರ ಮಾಡಿದವರು ವೀರಪ್ಪಜ್ಜನವರು. ವೇದಗಳನ್ನು ಓದಿದವರು ದೊಡ್ಡವರಲ್ಲ, ಜನರ ವೇದನೆಯನ್ನು ಅರ್ಥ ಮಾಡಿಕೊಂಡು ಪರಿಹಾರ ನೀಡುವವರು ದೊಡ್ಡವರು. ಭವಿಷ್ಯ ಹೇಳುವುದು ಮುಖ್ಯವಲ್ಲ, ಜನರ ಭವಿಷ್ಯವನ್ನು ರೂಪಿಸುವವರು ದೊಡ್ಡವರು ಎಂದು ಹೇಳಿದರು.

ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವದಲ್ಲಿ ಶ್ರೀ ಗುರುಪಾದ ದೇವರು

ಪ್ರವಚನಗಳಿಂದ ಬದುಕಿನ ಸಮಸ್ಯೆಗೆ ಉತ್ತರ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಗತ್ತಿನಲ್ಲಿ ಎಲ್ಲ ಪ್ರಾಣಿಗಳಿಗಿಂತ ಹೆಚ್ಚು ವಿಚಾರ ಶಕ್ತಿ ಹೊಂದಿರುವ ಪ್ರಾಣಿಯೆಂದರೆ ಅದು ಮನುಷ್ಯ. ಪುರಾಣ, ಪ್ರವಚನಗಳು ಮನುಷ್ಯನಲ್ಲಿ ವಿಚಾರಗಳ ಪ್ರಚೋದನೆಯನ್ನು ಮಾಡುತ್ತವೆ. ಇದರಿಂದ ಆತನ ದೈನಂದಿನ ಬದುಕಿನ ಸಮಸ್ಯೆಗಳಿಗೆ ಉತ್ತರ ಸಿಗುತ್ತದೆ ಎಂದು ರೋಣ ಗುಲಗಂಜಿ ಮಠದ ಶ್ರೀ ಗುರುಪಾದ ಸ್ವಾಮೀಜಿ ಹೇಳಿದರು.

ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವದ ಶನಿವಾರ ಸಂಜೆಯ ಪ್ರವಚನದಲ್ಲಿ ಪಾಲ್ಗೊಂಡು ಅವರು ಆಶೀರ್ವಚನ ನೀಡಿದರು.

ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವ ಜ್ಞಾನ ದಾಸೋಹ ಮತ್ತು ಅನ್ನ ದಾಸೋಹದ ಮೂಲಕ ಜರುಗುತ್ತಿರುವುದು ಸಂತಸದ ವಿಷಯ. ಮನುಷ್ಯ ಯಾವಾಗ ಮೊದಲನೇ ಸಾವನ್ನು ಕಂಡನೋ ಅಂದಿನಿಂದ ಅವನಲ್ಲಿ ಜಿಜ್ಞಾಸೆ ಪ್ರಾರಂಭವಾಯಿತು. ಎಂದಾದರೂ ಒಂದು ದಿನ ನಾನೂ ಸಾಯುತ್ತೇನೆ ಎಂಬ ಅರಿವು ಅವನಲ್ಲಿ ಮೂಡಿದಾಗ ಅಷ್ಟರೊಳಗೆ ಏನಾದರೂ ಸಾಧಿಸಬೇಕೆಂಬ ತಿಳುವಳಿಕೆ ಅವನಲ್ಲಿ ಹುಟ್ಟಿತು. ಈ ಸಾಧನೆಗೆ ಆಧ್ಯಾತ್ಮವೇ ದಾರಿ ಎಂಬುದನ್ನು ಅರಿತ ಆತ ಪುರಾಣ, ಪ್ರವಚನಗಳ ಮೂಲಕ ಅದನ್ನು ಪಡೆಯಲು ಮುಂದಾದ. ಯಾವುದೇ ಮಹಾತ್ಮರ ಪುಣ್ಯ ಪ್ರವಚನಗಳನ್ನು ಕೇಳಿದರೂ ಅದರಲ್ಲಿ ಬದುಕಿಗೆ ಮಾರ್ಗ ತೋರುವ ಅಂಶಗಳು ಇದ್ದೇ ಇರುತ್ತವೆ. ಅದರಲ್ಲಿಯೂ ಹಠಯೋಗಿ ವೀರಪ್ಪಜ್ಜನ ಪುರಾಣ ನಮ್ಮಲ್ಲಿ ಜೀವನ ಚೈತನ್ಯ ತುಂಬಲು ಸಹಾಯಕವಾಗಿದೆ ಎಂದರು.

ಪ್ರವಚನ ನುಡಿಗಳು
ಸರ್ವರಿಗೂ ಸುಸ್ವಾಗತ

ಜಗತ್ತಿನಲ್ಲಿ ಸೃಷ್ಟಿಯಾದ ಸಕಲ ವಸ್ತುಗಳೂ ಭಗವಂತನಿಂದಲೇ ಸೃಷ್ಟಿಯಾಗಿವೆ ಎಂಬುದನ್ನು ನಾವು ಮೊದಲು ತಿಳಿದುಕೊಳ್ಳಬೇಕು. ಅದಕ್ಕಾಗಿ ನಾವು ಭಗವಂತನಿಗೆ ಎಂದಿಗೂ ಕೃತಜ್ಞರಾಗಿರಬೇಕು. ನಾವು ಸ್ವಾರ್ಥವನ್ನು ತೊರೆದು ನಿಸ್ವಾರ್ಥತೆಯಿಂದ ಬದುಕಿದಾಗ ಮಾತ್ರ ನಮ್ಮ ಬಾಳು ಬಂಗಾರವಾಗುತ್ತದೆ. ಭಾರತೀಯ ಸಂಸ್ಕೃತಿಯಲ್ಲಿ ಒಂದೊಂದು ಆಚರಣೆಗೂ ಒಂದೊಂದು ಅರ್ಥವಿದೆ ಮತ್ತು ಬಹುತೇಕ ಅದು ವೈಜ್ಞಾನಿಕ ತಳಹದಿಯ ಮೇಲೆ ಅವಲಂಬಿತವಾಗಿದೆ. ನೀವು ಮಾಡುವ ದಾನ-ಧರ್ಮಗಳು ಎಂದಿಗೂ ಸ್ಥಿರವಾಗಿರುತ್ತವೆ ಮತ್ತು ನಿಮ್ಮ ಕೀರ್ತಿಯನ್ನು ಆಚಂದ್ರಾರ್ಕವಾಗಿ ಇರಿಸುತ್ತವೆ ಎಂದು ಶ್ರೀಗಳು ತಿಳಿಸಿದರು.

ವೇದಿಕೆಯ ಮೇಲೆ ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ. ಎಂ.ಸಿ. ಚಪ್ಪನ್ನಮಠ, ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ ಇದ್ದರು. ಗವಾಯಿ ಹನುಮಂತಕುಮಾರ ಮೇಟಿ ಸಂಗೀತ ಸೇವೆ ನೀಡಿದರು. ಶಾಂತಕುಮಾರ ಹಿರೇಮಠ ತಬಲಾ ಸಾಥ್ ನೀಡಿದರು. ಶಿಕ್ಷಕ ಎಂ.ಕೆ. ಬೇವಿನಕಟ್ಟಿ ನಿರೂಪಿಸಿದರು.

ಶ್ರೀ ವೀರಪ್ಪಜ್ಜನವರ ಜೀವನ ದರ್ಶನದ ಪ್ರವಚನ ನುಡಿ ನುಡಿದ ಡಾ. ವಿಶ್ವನಾಥ ಮಹಾಸ್ವಾಮಿಗಳವರು, ಬಾಲ್ಯದ ದಿನಗಳಲ್ಲಿ ಶ್ರೀ ವೀರಪ್ಪಜ್ಜನರ ಕಾರ್ಯ ಚಟುವಟಿಕೆಗಳು ಹೇಗಿದ್ದವು, ಅವನು ಯಾರಿಂದ ಪ್ರಭಾವಿತನಾಗಿ ವೈರಾಗ್ಯ ತಾಳಿದ, ನಂತರ ಅವನ ನಡೆ-ನುಡಿಗಳಲ್ಲಿ ಹೇಗೆ ಬದಲಾವಣೆಗಳಾದವು ಎಂಬುದನ್ನು ಸಾದೋಹರಣವಾಗಿ ವಿವರಿಸಿದರು.

ಜಯಂತಿ ಆಚರಣೆಗೆ ಅಧಿಕಾರಿಗಳ ನಿರ್ಲಕ್ಷ್ಯ: ಆರೋಪ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸರಕಾರದ ನಿರ್ದೇಶನದಂತೆ ಮಂಗಳವಾರ ರಥಸಪ್ತಮಿ ದಿನದಂದು ಆಚರಿಸಲಾಗುವ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ತಾಲೂಕಿನ ಬಹುತೇಕ ಇಲಾಖೆಯ ಅಧಿಕಾರಿಗಳು ಆಚರಿಸದೇ ಸರ್ಕಾರಿ ಆದೇಶವನ್ನು ಉಲ್ಲಂಘನೆ ಮಾಡಿದ್ದಾರೆಂದು ಶಿರಹಟ್ಟಿ ತಾಲೂಕಾ ಸವಿತಾ ಸಮಾಜದ ಅಧ್ಯಕ್ಷ ನಾಗರಾಜ ಅರೆಪಲ್ಲಿ ಆರೋಪಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಪೂರ್ವಭಾವಿ ಸಭೆಯಲ್ಲಿ ಎಲ್ಲ ಇಲಾಖೆಯ ಅಧಿಕಾರಿಗಳು ನಿರ್ಲಕ್ಷ್ಯ ತೋರದೇ ತಮ್ಮ ಕಚೇರಿಗಳಲ್ಲಿ ಜಯಂತಿ ಆಚರಣೆ ಮಾಡಬೇಕೆಂದು ತಹಸೀಲ್ದಾರರು ಸೂಚನೆ ನೀಡಿದ್ದರೂ ತಾಲೂಕಿನ ಬಹುತೇಕ ಇಲಾಖೆಯ ಅಧಿಕಾರಿಗಳು ಜಯಂತಿ ಆಚರಣೆಗೆ ನಿರ್ಲಕ್ಷ್ಯ ತೋರಿದ್ದಾರೆ. ಇಂತಹವರ ಮೇಲೆ ಸೂಕ್ತ ಕ್ರಮ ಕೈಕೊಳ್ಳಬೇಕೆಂದು ಅವರು ಒತ್ತಾಯಿಸಿದ್ದಾರೆ.

ಮಂಗಳೂರಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಸ್ಪೀಕರ್ ಯು ಟಿ ಖಾದರ್

ವಿಧಾನಸೌಧ ಆವರಣದಲ್ಲಿ ಪುಸ್ತಕ ಮೇಳ

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಜನಸಾಮಾನ್ಯರಿಗೆ ವಿಧಾನಸೌಧ ಆವರಣ ಮುಕ್ತವಾಗಿಸಿ, ಅವರಲ್ಲಿ ಓದಿನ ಬಗ್ಗೆ ಆಸಕ್ತಿ ಮೂಡಿಸುವ ಉದ್ದೇಶದೊಂದಿಗೆ ಫೆ.28ರಿಂದ ಮಾ.3ರವರೆಗೆ ವಿಧಾನಸೌಧ ಆವರಣದಲ್ಲಿ ಪುಸ್ತಕ ಮತ್ತು ಸಾಹಿತ್ಯ ಮೇಳ ಆಯೋಜಿಸಲಾಗುತ್ತಿದೆ ಎಂದು ಸ್ಪೀಕರ್ ಯು.ಟಿ. ಖಾದರ್ ತಿಳಿಸಿದ್ದಾರೆ.

ಅವರು ಸೋಮವಾರ ಮಂಗಳೂರಿನ ಸರ್ಕ್ಯೂಟ್ ಹೌಸ್ ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ವಿಧಾನಸೌಧದ ಆವರಣದಲ್ಲಿ ಫೆ.28ರಿಂದ ಮಾ.3ರವರೆಗೆ ಪುಸ್ತಕ ಮತ್ತು ಸಾಹಿತ್ಯ ಮೇಳ ನಡೆಯಲಿದೆ. ನಾಡಿನ ಸಾಹಿತಿಗಳು, ಬುದ್ಧಿಜೀವಿಗಳು, ಬರಹಗಾರರು, ಸಚಿವರು, ಶಾಸಕರು ಸೇರಿದಂತೆ ಪುಸ್ತಕಗಳನ್ನು ಪ್ರೀತಿಸುವವರು ಭಾಗವಹಿಸಲಿರುವ ಈ ಮೇಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆ.28ರಂದು ಚಾಲನೆ ನೀಡಲಿದ್ದಾರೆ ಎಂದರು.

ಪುಸ್ತಕ ಮೇಳದೊಂದಿಗೆ ಸಾಹಿತ್ಯ ಚರ್ಚೆ, ಗೋಷ್ಠಿ, ಪುಸ್ತಕ ಬಿಡುಗಡೆ ಕಾರ್ಯಕ್ರಮಗಳಿಗೂ ಇಲ್ಲಿ ಅವಕಾಶ ನೀಡಲಾಗಿದೆ. ಪುಸ್ತಕ ಮೇಳದ ಯಶಸ್ಸಿಗೆ ಹಿರಿಯ ಅಧಿಕಾರಿಗಳ ಸಮಿತಿ ರಚಿಸಲಾಗಿದೆ ಎಂದು ಅವರು ಹೇಳಿದರು.

ಪುಸ್ತಕ ಮೇಳದಲ್ಲಿ ಖಾಸಗಿ ಪುಸ್ತಕ ಪ್ರಕಾಶನಗಳಿಗೂ ಪುಸ್ತಕಗಳ ಪ್ರದರ್ಶನಕ್ಕೆ ಅವಕಾಶ ನೀಡಲಾಗುವುದು. ಲೇಖಕರು ಅಥವಾ ಸಾಹಿತಿಗಳು ತಮ್ಮ ಪುಸ್ತಕಗಳನ್ನು ಬಿಡುಗಡೆಗೊಳಿಸಲು ಅವಕಾಶ ಕಲ್ಪಿಸಲಾಗುವುದು. ಇದಲ್ಲದೆ, ಉತ್ತಮ ಸಾಹಿತ್ಯ ಕೃತಿಗೆ ಪ್ರಶಸ್ತಿ ನೀಡಲು ಉದ್ದೇಶಿಸಲಾಗಿದೆ ಎಂದು ಸ್ಪೀಕರ್ ವಿವರಿಸಿದರು.

ಶಾಸಕರ ಅನುದಾನದಲ್ಲಿ ಖರೀದಿಗೆ ಅವಕಾಶ ಸ್ಪರ್ಧಾತ್ಮಕ ಪುಸ್ತಕಗಳು ಸೇರಿದಂತೆ ನಾನ ಪ್ರಕಾರದ ಬೇಡಿಕೆಯ ಪುಸ್ತಕಗಳನ್ನು ಶಾಸಕರ ಇಲ್ಲಿ ಖರೀದಿಸಿ ತಮ್ಮ ಕ್ಷೇತ್ರಗಳಲ್ಲಿನ ಗ್ರಂಥಾಲಯಗಳು, ಸರಕಾರಿ ಕಾಲೇಜುಗಳಿಗೆ ಪೂರೈಸಬಹುದು. ಇದಕ್ಕೆ ಪೂರಕವಾಗಿ ಶಾಸಕರ ನಿಧಿಯಲ್ಲಿನ 2ರಿಂದ 3 ಲಕ್ಷ ರೂ.ವರೆಗೆ ಪುಸ್ತಕಗೆ ಖರೀದಿಗೆ ಅವಕಾಶ ಮಾಡಿಕೊಡಲಾಗುವುದು ಎಂದು ಸಭಾಧ್ಯಕ್ಷರು ಹೇಳಿದರು.

ಪುಸ್ತಕ ಮೇಳದ ಅವಧಿಯಲ್ಲಿ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗುವುದು, ಮೇಳದ ಸಂದರ್ಭದಲ್ಲಿ ನಿತ್ಯ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ. ಇಲ್ಲಿ ಭೇಟಿ ನೀಡುವವರಿಗೆ ತರಹೇವಾರಿ ತಿಂಡಿ-ಖಾದ್ಯಗಳನ್ನು ಒಳಗೊಂಡ ಆಹಾರ ಮೇಳವೂ ಇರಲಿದೆ. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಆದ್ಯತೆ ನೀಡಲಾಗುವುದು. ವಿಚಾರಗೋಷ್ಠಿಗಳು, ಚರ್ಚೆಗಳೂ ನಡೆಯಲಿವೆ ಎಂದು ಯು.ಟಿ. ಖಾದರ್ ತಿಳಿಸಿದರು.

ಲಾಂಛನ ವಿನ್ಯಾಸ ಆಹ್ವಾನ

ನಾಲ್ಕು ದಿನಗಳ ಪುಸ್ತಕ-ಸಾಹಿತ್ಯ ಮೇಳಕ್ಕೆ ಸಂಬಂಧಪಟ್ಟಂತೆ ಪ್ರಶಸ್ತಿ ನೀಡಲು ಹಾಗೂ ಲಾಂಛನ ವಿನ್ಯಾಸಗೊಳಿಸಲು ಉದ್ದೇಶಿಸಿದ್ದು, ಈ ಸಂಬಂಧ ಸಾರ್ವಜನಿಕರಿಗೆ ಮುಕ್ತ ಆಹ್ವಾನ ನೀಡಿದೆ. ಪ್ರಶಸ್ತಿಗೆ ಸೂಕ್ತ ಹೆಸರನ್ನು ಹಾಗೂ ಪುಸ್ತಕ ಮೇಳದ ಲಾಂಛನವನ್ನು ಕಳುಹಿಸಬಹುದು. ಆಯ್ಕೆಯಾಗುವವರಿಗೆ ಬಹುಮಾನ ನೀಡಲಾಗುವುದು. ಆಸಕ್ತರು ಪುಸ್ತಕ ಮೇಳಕ್ಕೆ ಸರಿಹೊಂದುವ ಲಾಂಛನವನ್ನು ವಿನ್ಯಾಸಗೊಳಿಸಿ ಹಾಗೂ ಪ್ರಶಸ್ತಿಯ ಹೆಸರನ್ನು ತಮ್ಮ ವಿವರಗಳೊಂದಿಗೆ ಫೆ.3ರೊಳಗೆ ಇಮೇಲ್ secy-kla-kar@nic.in ಅಥವಾ ವಾಟ್ಸಾಪ್ ಸಂಖ್ಯೆ 9448108798 ಇದಕ್ಕೆ ಕಳುಹಿಸಬಹುದು ಎಂದು ವಿಧಾನಸಭಾಧ್ಯಕ್ಷರು ತಿಳಿಸಿದರು.

ಇಂದು ಕಾಯಕ ಶರಣರ ಜಯಂತಿ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶ ದನ್ವಯ ಈ ವರ್ಷವು ದಿ. 10.02.2025 ರಂದು ಆಚರಿಸಲಾಗುವ ಕಾಯಕ ಶರಣರ ಜಯಂತಿ ನಿಮಿತ್ತ ಫೆಬ್ರವರಿ 5 ರಂದು ಸಾಯಂಕಾಲ 4 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಸಮಾಜದ ಮುಖಂಡರು, ಅಭಿಮಾನಿಗಳು ಹಾಜರಾಗಿ ಸೂಕ್ತ ಸಲಹೆ, ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಪ್ರೊ. ಅನ್ನದಾನಿ ಹಿರೇಮಠ

ಉತ್ಸವದ ಮೂಲ ಉದ್ದೇಶ ಮರೆಯದಿರಲಿ

ಯೋಗ YOGA
ಸಮಾಲೋಚನೆ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ದಿನಮಾನದಲ್ಲಿ ಉತ್ಸವಗಳನ್ನು ಬಹುವಿಜೃಂಭಣೆ, ವೈಭವ, ಹೆಚ್ಚಿನ ಆಡಂಬರಗಳಲ್ಲಿ ಆಚರಿಸಿ ಉತ್ಸವದ ಮೂಲ ಉದ್ದೇಶವನ್ನೇ ಮರೆಯುತ್ತಿರುವುದು ಸಾಮಾನ್ಯವಾಗಿದೆ. ಇನ್ನುಳಿದ ಶಾಲಾ-ಕಾಲೇಜುಗಳು, ವಿದ್ಯಾವಂತರನ್ನು ಸೃಷ್ಟಿಸಿದರೆ ಯೋಗ ಪಾಠಶಾಲೆ ಪ್ರಜ್ಞಾವಂತ ನಾಗರಿಕರನ್ನು ಸೃಷ್ಟಿಸುವ ಸಂಸ್ಥೆಯಾಗಿದೆ. 50 ವರ್ಷಗಳಲ್ಲಿ ಸಾಧಿಸಿದ ಸಾಧನೆ ಮತ್ತು ಮುಂದಿನ ಧೋರಣೆಗಳನ್ನು ತಿಳಿಸುವದಕ್ಕಾಗಿ ಸುವರ್ಣ ಮಹೋತ್ಸವ ಆಚರಣೆ ಇರಲಿ ಮತ್ತು ಅದು ಸಾತ್ವಿಕವಾಗಿರಲಿ ಎಂದು ಗದಗ-ಬೆಟಗೇರಿ ನಗರಸಭಾ ಪದವಿಪೂರ್ವ ಮಹಾವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಅನ್ನದಾನಿ ಹಿರೇಮಠರ ಅಭಿಪ್ರಾಯಪಟ್ಟರು.

ಎಸ್. ವಾಯ್. ಬಿ.ಎಂ.ಎಸ್. ಯೋಗಪಾಠಶಾಲೆ ಮುಂಬರುವ 19-5-2025ರಂದು ಸುವರ್ಣ ಮಹೋತ್ಸವ ಆಚರಿಸಿಕೊಳ್ಳಲು ಸನ್ನದ್ಧವಾಗಿದ್ದು, ಪೂರ್ವಭಾವಿಯಾಗಿ ಆಯೋಜಿಸಿದ್ದ ಸಮಾಲೋಚನಾ ಸಭೆಯಲ್ಲಿ ಅವರು ಮಾತನಾಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ ಖ್ಯಾತ ವಾಗ್ಮಿಗಳು ಮತ್ತು ಹಿರಿಯರಾದ ಪ್ರಾ. ಕೆ.ಎಚ್. ಬೇಲೂರ ಮಾತನಾಡಿ, ಇಂದು ನಾವು ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ, ತಾಂತ್ರಿಕ, ಕೃಷಿ, ವಿಜ್ಞಾನ ಇನ್ನಿತರೆ ಕ್ಷೇತ್ರಗಳಲ್ಲಿ ಹೆಚ್ಚಿನ ಪ್ರಗತಿ ಸಾಧಿಸಲು ಯೋಗ ಶಕ್ತಿಯ ಅಗತ್ಯತೆ ಇದೆ. ಅಂತೆಯೇ ಪೂಜ್ಯ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಶ್ರೀಮಠದ ಪೀಠಾಧಿಪತಿಗಳಾದ ಮೇಲೆ ಪ್ರಪ್ರಥಮವಾಗಿ ಯೋಗ ಪಾಠಶಾಲೆ ಸ್ಥಾಪಿಸಿದರು. ಪೂಜ್ಯರ ಕಾರ್ಯ ಸಾರ್ಥಕಗೊಳ್ಳಲೆಂದು ಪ್ರಸ್ತುತ ಪೀಠಾಧಿಪತಿಗಳಾದ ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸುಸಜ್ಜಿತ ಯೋಗ ಮಹಾವಿದ್ಯಾಲಯ ನಿರ್ಮಾಣಗೊಳ್ಳಲೆಂದು ಯೋಗ ಪಾಠಶಾಲೆಗೆ 2 ಎಕರೆ ಭೂಮಿ ಮೀಸಲಾಗಿರಿಸಿರುವದು ಈ ನಾಡಿನ ಸೌಭಾಗ್ಯವಾಗಿದೆ. ಈಗಾಗಲೇ ಪ್ರಾರಂಭಗೊಂಡಿರುವ ಯೋಗ ಮಹಾವಿದ್ಯಾಲಯದ ನಿಯೋಜಿತ ಕಟ್ಟಡ ಪೂರ್ಣಗೊಳ್ಳಲು ಶ್ರಮಿಸೋಣ. ಈ ನಿಟ್ಟಿನಲ್ಲಿ ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವವನ್ನು ಸಾರ್ಥಕ ರೀತಿಯಲ್ಲಿ ಆಚರಿಸೋಣ ಎಂದರು.

ಪ್ರಾರಂಭದಲ್ಲಿ ಸಾಮೂಹಿಕವಾಗಿ ಪ್ರಾರ್ಥನೆ ನಡೆಯಿತು. ವಿ.ಎಂ. ಮುಂದಿನಮನಿ ಸ್ವಾಗತಿಸಿದರು. ಯೋಗ ಪಾಠಶಾಲೆ ನಿರ್ದೇಶಕ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕವಾಗಿ ಸಭೆಯ ವಿಷಯ ತಿಳಿಸಿ ಕಾರ್ಯಕ್ರಮ ನಿರೂಪಿಸಿದರು. ಷಡಕ್ಷರಿ ಮೆಣಸಿನಕಾಯಿ ವಂದಿಸಿದರು.

ವಿಶೇಷ ಆಮಂತ್ರಿತರಾಗಿ ಆಗಮಿಸಿದ ಡಿ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ನಿವೃತ್ತ ಪ್ರಾಚಾರ್ಯ ಡಾ. ಎಸ್.ಬಿ. ಗೋವಿಂದಪ್ಪ, ಯಾವುದೇ ಕಾರ್ಯ ಯಶಸ್ಸಿಗೆ ಸಂಘಟನೆ ಬೇಕು. ಸಂಘಟನೆಯ ಯಶಸ್ಸಿಗೆ ಎಲ್ಲ ಬಲ್ಲವನಾಗಿರುವ ಗುರು (ನಾಯಕ) ಬೇಕು. ಈ ಹಿನ್ನೆಲೆಯಲ್ಲಿ ಯೋಗ ಪಾಠಶಾಲೆ ಬೆಳೆದು ಬಂದಿದೆ. ಸರ್ವ ಸಮಸ್ಯೆಗಳ ಪರಿಹಾರ ಯೋಗದಿಂದ ಸಾಧ್ಯ ಎಂದು ನಾವೆಲ್ಲರೂ ಹೇಳುತ್ತೇವೆ. ಈ ಮಾತನ್ನು ಯೋಗ ಪಾಠಶಾಲೆ ನಿತ್ಯ ಸಾಧಿಸುತ್ತಿದೆ. ಯೋಗ ಪಾಠಶಾಲೆ ಕೈಗೊಂಡ ಕಾರ್ಯ ಯಶಸ್ಸಿಗೆ ನಾವೆಲ್ಲರೂ ಸಕ್ರಿಯವಾಗಿ ಪಾಲ್ಗೊಂಡು ಸ್ವಯಂ ಸೇವಕರಂತೆ ಕಾರ್ಯನಿರ್ವಹಿಸಿದರೆ ದೇಶಕ್ಕೆ ನೀಡುವ ಮಹಾನ್ ಕಾಣಿಕೆ ನಮ್ಮದಾಗುವದೆಂದು ಹೇಳಿದರು.

ಗಾನಯೋಗಿ ಪಂ. ಪಂಚಾಕ್ಷರಿ ಗವಾಯಿಗಳವರ 133ನೇ ಜಯಂತ್ಯುತ್ಸವ 'ಅಮರಸ್ವರ ಸಮಾರೋಹ'

ಗಾನಯೋಗಿ ಪಂಚಾಕ್ಷರಿ ಗವಾಯಿ ಟ್ರಸ್ಟ್ ಸ್ಥಾಪನೆಯಾಗಲಿ

ಕಲಾ ವಿಕಾಸ ಪರಿಷತ್ (ರಿ)

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಗದಗು ಸಂಗೀತದ ಗದ್ದಿಗೆಯನ್ನಾಗಿ ಮಾಡಿದ, ಪಂಡಿತ ಪಂಚಾಕ್ಷರಿ ಗವಾಯಿಗಳವರ ಕುರಿತಾಗಿ ಹುಬ್ಬಳಿ ಧಾರವಾಡ ಪ್ರದೇಶದಲ್ಲಿ ಯಾವುದೇ ಸ್ಮಾರಕವಿಲ್ಲ. ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಗವಾಯಿಗಳವರ ಹೆಸರಲ್ಲಿ ಅಧ್ಯಯನ ಪೀಠ ಸ್ಥಾಪನೆಯಾಗಬೇಕು ಎಂಬ ಬೇಡಿಕೆ ಈಡೇರಿಲ್ಲ. ಈಗ ನಾವು ಸ್ಮಾರಕ ಮತ್ತು ಅಧ್ಯಯನ ಪೀಠದೊಂದಿಗೆ ಗದುಗಿನಲ್ಲಿ ಗಾನಯೋಗಿ ಪಂಚಾಕ್ಷರಿ ಗವಾಯಿ ಟ್ರಸ್ಟ್ ಸ್ಥಾಪಿಸಬೇಕು ಎಂದು ಸರಕಾರಕ್ಕೆ ಒತ್ತಾಯಿಸುತ್ತೇವೆ ಎಂದು ಕಲಾವಿಕಾಸ ಪರಿಷತ್ ಸಂಸ್ಥಾಪಕ ಸಿ.ಕೆ.ಹೆಚ್. ಶಾಸ್ತ್ರೀ (ಕಡಣಿ) ಹೇಳಿದರು.

ಅವರು ಕಲಾ ವಿಕಾಸ ಪರಿಷತ್ತು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಸಂಯುಕ್ತವಾಗಿ ಹಮ್ಮಿಕೊಂಡಿದ್ದ ಗಾನಯೋಗಿ ಪಂಚಾಕ್ಷರಿ ಗವಾಯಿಗಳವರ 133ನೇ ಜಯಂತ್ಯುತ್ಸವ, 'ಅಮರಸ್ವರ ಸಮಾರೋಹ' ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಕಾಶವಾಣಿ ಧಾರವಾಡ ಕೇಂದ್ರದ ನಿವೃತ್ತ ನಿರ್ದೇಶಕ ಡಾ. ಬಸು ಬೇವಿನಗಿಡದ, ಹಿರಿಯ ರಂಗ ನಿರ್ದೇಶಕಿ, ಗಾಯಕಿ ವಿಶ್ವೇಶ್ವರಿ ಬಸವಲಿಂಗಯ್ಯ ಹಿರೇಮಠ, ಕವಿವಿ ಲಲಿತಕಲಾ ಹಾಗೂ ಸಂಗೀತ ಮಾಹಾವಿದ್ಯಾಲಯ, ಪ್ರಾಧ್ಯಾಪಕ ಡಾ. ಎ.ಎಲ್. ದೇಸಾಯಿ ಭಾಗವಹಿಸಿ ಗಾನಯೋಗಿ ಪಂಚಾಕ್ಷರಿ ಗವಾಯಿಗಳವರ ಜೀವನ ಸಾಧನೆ-ಸಂದೇಶ ಕುರಿತಾಗಿ ಮಾತನಾಡಿದರು.

ಬೆಂಗಳೂರಿನ ಡಾ. ಗೋಪಾಲ ಕೆ.ರಾಯಚೂರ, ಧಾರವಾಡದ ಡಾ. ಪರಶುರಾಮ ಕಟ್ಟಿಸಂಗಾವಿ, ಹಳಿಯಾಳದ ಸುಮಾ ಹಡಪದ, ಡಂಬಳದ ಬಸವರಾಜ ಎನ್.ಸಿದ್ದಣ್ಣನವರ, ಜ್ಞಾನಜ್ಯೋತಿ ಕಲಾ ಬಳಗ ಹುಬ್ಬಳ್ಳಿ, ಶ್ರೀ ರಾಜರಾಜೇಶ್ವರಿ ಸಂಗೀತ ಕಲಾ ಪಾಠ ಶಾಲೆ ಇಟ್ಟಿಗಿ, ಸುಸ್ವರ ಸಂಗೀತ ವಿದ್ಯಾ ಸಂಸ್ಥೆ ದಾಂಡೇಲಿ, ಶ್ರೀ ದುರ್ಗಾದೇವಿ ನಾಟ್ಯ ಶಾಲೆ ಹಳಿಯಾಳ ಇವರುಗಳಿಗೆ 'ಸುವರ್ಣ ಸಿರಿ ಸಮ್ಮಾನ' ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಬಸವರಾಜ ಹಡಪದ ಸರ್ವರಿಗೂ ಸ್ವಾಗತಿಸಿದರು.

ಸುಮಂಗಲಾ ಚಕ್ರಸಾಲಿ ಹಳಿಯಾಳ ನಿರೂಪಿಸಿ ವಂದಿಸಿದರು. ಬೆಳಿಗ್ಗೆ 'ಅಮರಸ್ವರ ಸಮಾರೋಹ' ಉದ್ಘಾಟನೆಯನ್ನು ಖ್ಯಾತ ಹಿಂದೂಸ್ಥಾನಿ ಗಾಯಕ ಡಾ. ಶಾಂತಾರಾಮ ಹೆಗಡೆ ಉದ್ಘಾಟಿಸಿದರು.ಧಾರವಾಡದ ಹಿರಿಯ ರಂಗಕರ್ಮಿ ಡಾ. ಶಶಿಧರ ನರೇಂದ್ರ ಸಮಾರಂಭದ ಅಧ್ಯಕ್ಷೀಯ ನುಡಿಗಳನ್ನಾಡಿದರು. ಡಾ. ವೀಣಾ ಬಿರಾದಾರ, ಸಿ.ಕೆ.ಹೆಚ್. ಶಾಸ್ತ್ರೀ (ಕಡಣಿ) ಪ್ರಾಸ್ತಾವಿಕವಾಗಿ ಮಾತನಾಡಿದರು.

ದೇವಿಕಾ ಕೆ.ಜೋಗಿ ಸ್ವಾಗತಿಸಿದರು. ಸ್ವರ ಸಂವಾದಿನ ಸಂಗೀತ ಪಾಠಶಾಲೆಯ ಮಕ್ಕಳು ಪ್ರಾರ್ಥನಾ ಸಂಗೀತ ನಡೆಸಿಕೊಟ್ಟರು. ಐಶ್ವರ್ಯ ಅಮೂಲ್ಯ ಹಡಪದ ಸಹೋದರಿಯರು ಸ್ವಾಗತ ನೃತ್ಯ ಸೇವೆ ಸಲ್ಲಿಸಿದರು. ಪ್ರೊ. ಪಿ.ಆರ್. ನಾಗರಾಳ ನಿರೂಪಿಸಿದರು. ಡಾ. ಎ.ಎಲ್. ದೇಸಾಯಿ ವಂದಿಸಿದರು.

ಇದೇ ಸಂದರ್ಭದಲ್ಲಿ ಖ್ಯಾತ ತಬಲಾ ವಾದಕ ಪಂ. ಶಾಂತಲಿಂಗಪ್ಪ ಹೂಗಾರ (ದೇಸಾಯಿ ಕಲ್ಲೂರ) ಹಾಗೂ ಧಾರವಾಡದ ಶ್ರೀ ಕುಮಾರೇಶ್ವರ ಕಲ್ಚರಲ್ ಸೊಸೈಟಿ, ಶಿರಸಿಯ ಯಕ್ಷ ಕಲಾಸಂಗಮ ಕಲಾ ಪೋಷಕ ಮತ್ತು ಕಲಾ ಶಿಕ್ಷಣ ಸಂಸ್ಥೆಗಳಿಗೆ ಕಲಾ ವಿಕಾಸ ಪರಿಷತ್‌ನ 2023-24ನೇ ಸಾಲಿನ ವಾರ್ಷಿಕ ಪ್ರಶಸ್ತಿ 'ಗಾನಯೋಗಿ ಪಂಚಾಕ್ಷರಿ ಅನುಗ್ರಹ' ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸಿ.ಸಿ.ಎನ್. ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿಗಳ ಸ್ನೇಹಿತರ ಬಳಗದಿಂದ 'ಗರುವಂದನಾ'

ಗುರುಗಳ ಸೇವೆಯ ಸ್ಮರಣೆ ಸಾರ್ಥಕ ಕಾರ್ಯ

vivo V30 Pro | ZEISS
Vkp, Shirahatti Karnataka 02/01/2025, 14:00

■ವಿಜಯಸಾಕ್ಷಿ ಸುದ್ದಿ, ಗದಗ

ಪಾಠ ಹೇಳಿ, ಜ್ಞಾನಾರ್ಜನೆ ಮಾಡಿಸಿ ಬದುಕಿಗೆ ಬೆಳಕಾದ ಶಿಕ್ಷಕರನ್ನು ಎಂದಿಗೂ ಮರೆಯಬಾರದು ಎಂದು ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಎ. ಬಳಿಗೇರ ಹೇಳಿದರು.

ಅವರು ಜಿಲ್ಲೆಯ ಶಿರಹಟ್ಟಿ ಪಟ್ಟಣದ ಸಿ.ಸಿ.ಎನ್. ಪ್ರೌಢಶಾಲೆಯಲ್ಲಿ 2008-2011ನೇ ಸಾಲಿನಲ್ಲಿ ವ್ಯಾಸಂಗ ಮಾಡಿದ ಹಳೆಯ ವಿದ್ಯಾರ್ಥಿಗಳ ಸ್ನೇಹಿತರ ಬಳಗದಿಂದ ಹಮ್ಮಿಕೊಂಡಿದ್ದ ಗುರುವಂದನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗುರುಗಳ ಸೇವೆಯನ್ನು ಸ್ಮರಿಸುವುದು ಮತ್ತು ಅವರಿಗೆ ಪ್ರತ್ಯಕ್ಷವಾಗಿ ಧನ್ಯತೆ ಸಮರ್ಪಣೆ ಮಾಡುವುದು ಸಾರ್ಥಕ ಕಾರ್ಯ. ಇದೇ ಶಾಲೆಯಲ್ಲಿ ವ್ಯಾಸಂಗ ಮಾಡಿರುವ ಹಳೆಯ ವಿದ್ಯಾರ್ಥಿಗಳು 15 ವರ್ಷದ ನಂತರ ಒಂದೆಡೆ ಸೇರಿ ಕಾರ್ಯಕ್ರಮ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.

ನಿವೃತ್ತ ಶಿಕ್ಷಕ ವಿ.ಎಸ್. ಶಟವಾಜಿ ಮಾತನಾಡಿ, ಪಾಠ ಮಾಡಿದ ಗುರುಗಳು ಯಾವುದೇ ಅಪೇಕ್ಷೆ ಇಲ್ಲದೆ ಶಿಷ್ಯರ ಭವಿಷ್ಯ ರೂಪಿಸುತ್ತಾರೆ. ಜೀವನಕ್ಕೆ ಮಾರ್ಗದರ್ಶಕರಾಗುತ್ತಾರೆ. ಆದರೆ ಇಂದಿನ ಶಿಕ್ಷಣ ಪದ್ಧತಿ ಸಾಕಷ್ಟು ಬದಲಾಗಿದೆ. ಮಕ್ಕಳಿಗೆ ದಂಡಿಸದೆ, ಶಿಕ್ಷಿಸದೆ ಪಾಠ ಮಾಡಬೇಕು ಎಂದು ಪಾಲಕರೇ ತಾಕೀತು ಮಾಡುತ್ತಾರೆ. ಇದು ಬೇಸರದ ಸಂಗತಿ ಎಂದರು.

ಶಿಕ್ಷಕರಾದ ಸಿ.ಎಂ. ಪತ್ತಾರ ಹಾಗೂ ಪಿ.ವಿ. ಹಿರೇಮಠ ಅವರು ಮಾತನಾಡಿ, ವಿದ್ಯಾರ್ಥಿಗಳ ಕಲಿಕೆ ಶ್ರೇಷ್ಠ ಮಟ್ಟದಲ್ಲಿ ಇರಬೇಕು ಎಂಬುದಕ್ಕಾಗಿ ಗುರುಗಳು ದಂಡಿಸುತ್ತಾರೆ.

ಬಾಲ್ಯದಲ್ಲಿ ತಿದ್ದದೇ, ತಪ್ಪಿಗೆ ಶಿಕ್ಷೆ ನೀಡದೇ ಕಲಿಸುವ ಶಿಕ್ಷಣವು ನಿಜವಾದ ಶಿಕ್ಷಣವೇ ಅಲ್ಲ. ವಿದ್ಯಾರ್ಥಿಗಳ ಬದುಕು ಹಸನಾಗಲಿ ಎಂದು ಮಾತ್ರ ಶಿಕ್ಷಕರು ಬಯಸುತ್ತಾರೆ. ಈ ನಿಟ್ಟಿನಲ್ಲಿ ಇಂದಿನ ಶಿಕ್ಷಕ-ಪಾಲಕರ ಸಂಬಂಧ ಉನ್ನತೀಕರಣಗೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ನಿವೃತ್ತ ಶಿಕ್ಷಕ ಎಚ್.ಎಂ. ದೇವಗಿರಿ ಮಾತನಾಡಿ, ಪ್ರತಿಯೊಬ್ಬರೂ ಗುರು ಋಣ ಮತ್ತು ಪಿತೃಋಣಗಳನ್ನು ತೀರಿಸುವ ಕಾರ್ಯ ಮಾಡಬೇಕು. ಇದರಿಂದ ಉತ್ತರೋತ್ತರ ಸಾರ್ಥಕತೆಯನ್ನು ಸಂಭ್ರಮಿಸಬಹುದು ಎಂದು ಹೇಳಿದರು.

ನಿವೃತ್ತ ಶಿಕ್ಷಕ ಬಿ.ಎಂ. ಲಮಾಣಿ ಮಾತನಾಡಿ, 15 ವರ್ಷದ ಹಿಂದೆ ನಮ್ಮಿಂದ ಪಾಠ ಕೇಳಿದ ಮಕ್ಕಳು ಇಂದು ಉನ್ನತ ಸ್ಥಾನಗಳಲ್ಲಿದ್ದಾರೆ. ಅವರೆಲ್ಲರೂ ಒಂದೆಡೆ ಸೇರಿ ನಮ್ಮನ್ನು ನೆನಪಿಸಿಕೊಂಡು, ಗುರುವಂದನೆ ಸಲ್ಲಿಸಿರುವುದು ನಮ್ಮ ಬದುಕಿನ ಸುವರ್ಣ ಘಳಿಗೆ ಎಂದರು.

ಇದೇ ಸಂದರ್ಭದಲ್ಲಿ ಅಗಲಿದ ಶಿಕ್ಷಕ ಎ.ಬಿ. ಹರ್ಲಾಪುರ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಸ್ನೇಹ ಬಳಗದ ಜ್ಯೋತಿ ಪತ್ತಾರ ಪ್ರಾಸ್ತಾವಿಕ ಮಾತನಾಡಿದರು. ಸುಧಾ, ಅಶ್ವಿನಿ ಪ್ರಾರ್ಥಿಸಿದರು. ಶ್ರೀದೇವಿ ವರವಿ ಸ್ವಾಗತಿಸಿದರು. ಅಕ್ಕಮ್ಮ ಗೌಳಿ ನಿರೂಪಿಸಿದರೆ, ಯಲ್ಲಮ್ಮ ಕೋಳಿ ವಂದಿಸಿದರು. ಅಶ್ವಿನಿ ಕಡಕಬಾವಿ ಸನ್ಮಾನ ಕಾರ್ಯಕ್ರಮ ನಿರ್ವಹಿಸಿದರು. ಈ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ನಾಣಕಿ ನಾಯ್ಕ, ಎಸ್.ಡಿ.ಎಂ.ಸಿ ಅಧ್ಯಕ್ಷ ನಾಗರಾಜ ಲಕ್ಕುಂಡಿ ಉಪಸ್ಥಿತರಿದ್ದರು.

ಗೌರವ ಸಮರ್ಪಣೆ

ನಿವೃತ್ತ ಶಿಕ್ಷಕರಾದ ಕೆ.ಎ. ಬಳಿಗೇರ, ಎಚ್.ಎಂ. ದೇವಗಿರಿ, ವಿ.ಎಸ್. ಶಟವಾಜಿ, ಬಿ.ಎಂ. ಲಮಾಣಿ, ಹಾಗೂ ಶಿಕ್ಷಕರಾದ ಪಿ.ವಿ. ಹಿರೇಮಠ, ಸಿ.ಎಂ. ಪತ್ತಾರ, ವೆಂಕಟೇಶ ಪಾಟೀಲ, ಶಿಕ್ಷಕರಾದ ಸಂಧ್ಯಾ ಕಾಂಬಳೆ, ಶೋಭಾ ಮೂರಶಿಳ್ಳಿ, ಶಾಲೆಯ ಮುಖ್ಯೋಪಾಧ್ಯಾಯೆ ಚಂಪಾ ಪಾಟೀಲ ಅವರಿಗೆ ಹಳೆಯ ವಿದ್ಯಾರ್ಥಿಗಳು ಗೌರವ ಸಮರ್ಪಣೆ ಮಾಡಿದರು.

ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಡೇ-ನಲ್ಮ ಯೋಜನೆಯಡಿ ರಚಿಸಿದ ಮಹಿಳಾ ಸ್ವ ಸಹಾಯ ಗುಂಪುಗಳಿಗೆ ಈ ಪ್ರಕಟಣೆ ಮೂಲಕ ತಿಳಿಯಪಡಿಸುವುದೇನೆಂದರೆ ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಗೆ ಸಂಬಂಧಿಸಿದ ಆಸ್ತಿ ತೆರಿಗೆ ಹಾಗೂ ನೀರಿನ ತೆರಿಗೆಯ ಬಾಕಿ, ಬಡ್ಡಿ ಸಹಿತವಾಗಿ ವಾರ್ಷಿಕ ಬೇಡಿಕೆ ಸಹಿತ ವಸೂಲಿ ಮಾಡಲು ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಡೇ-ನಲ್ಮ ಯೋಜನೆಯಡಿ ನೋಂದಣಿಯಾದ ಸ್ಥಳೀಯ ಮಹಿಳಾ ಸ್ವ ಸಹಾಯ ಗುಂಪುಗಳ ಸೇವೆಯನ್ನು ಪಡೆದು ಸದರಿ ಸ್ವ ಸಹಾಯ ಗುಂಪುಗಳಿಗೆ ವಸೂಲಾದ ಮೊತ್ತದಲ್ಲಿ ಶೇ.5 ರಷ್ಟು ಪ್ರೋತ್ಸಾಹ ಧನವನ್ನು ನೀಡಲಾಗುವುದು. ಆಸಕ್ತಿಯುಳ್ಳ ಮಹಿಳಾ ಸ್ವ ಸಹಾಯ ಗುಂಪುಗಳು ಫೆಬ್ರವರಿ 12 ರಂದು ಸಂಜೆ 4 ಗಂಟೆಯೊಳಗೆ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ನಗರಸಭೆಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯದಲ್ಲಿ ಇರುವ ಡೇ-ನಲ್ಮ ಶಾಖೆಗೆ ಕಚೇರಿಯ ವೇಳೆಯಲ್ಲಿ ಹಾಜರಾಗಿ ಮಾಹಿತಿಯನ್ನು ಪಡೆಯಬಹುದಾಗಿದೆ.

ಸ್ವ ಸಹಾಯ ಗುಂಪು ಡೇ-ನಲ್ಮ ಅಭಿಯಾನದಡಿ ನೊಂದಾಯಿಸಿ ಎಂಐಎಸ್ ಕೋಡ್ ಹೊಂದಿರಬೇಕು, ಗುಂಪಿನ ಪಂಚಸೂತ್ರಗಳನ್ನು ಅನುಸರಿಸುತ್ತಿರಬೇಕು (ನಿರಂತರ ಸಭೆ, ನಿರಂತರ ಉಳಿತಾಯ, ಆಂತರಿಕ ಸಾಲ ವಿತರಣೆ, ನಿಯಮಿತ ಸಾಲ ಮರುಪಾವತಿ ಮತ್ತು ದಾಖಲೆ ನಿರ್ವಹಣೆ) ಸ್ವ ಸಹಾಯ ಗುಂಪಿನ ಸದಸ್ಯರು ಕನಿಷ್ಟ 7ನೇ ತರಗತಿಯವರೆಗೆ ಶಿಕ್ಷಣವನ್ನು ಹಾಗೂ ಎಲೆಕ್ಟ್ರಾನಿಕ್ ಪರಿಕರಗಳನ್ನು ಬಳಸುವ ಸಾಮರ್ಥ್ಯ ಹೊಂದಿರಬೇಕು. ಸ್ವಸಹಾಯ ಗುಂಪು ಸಕ್ರಿಯ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು. ಬ್ಯಾಂಕಿನ ಮೂಲಕ ಅಥವಾ ಆಂತರಿಕ ಸಾಲ ಪಡೆದು ನಿಯಮಿತವಾಗಿ ಸಾಲ ಮರುಪಾವತಿಸಿರಬೇಕು.

ಸ್ವ ಸಹಾಯ ಗುಂಪು ಕನಿಷ್ಟ 3 ವರ್ಷ ಪೂರೈಸಿರಬೇಕು. ಮಹಿಳಾ ಸ್ವ ಸಹಾಯ ಗುಂಪಿನ ಸದಸ್ಯರು ಯಾವುದೇ ಅಪರಾಧ ಹಾಗೂ ಸಮಾಜ ವಿರೋಧಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿರುವ ಹಿನ್ನಲೆಯನ್ನು ಹೊಂದಿರಬಾರದು. ನಗರ ಸ್ಥಳೀಯ ಸಂಸ್ಥೆಯಿಂದ ನಿಗದಿಪಡಿಸಲಾದ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ ವಸೂಲಾತಿಯ ಗುರಿಗೆ ತಕ್ಕಂತೆ ಕಾರ್ಯ ನಿರ್ವಹಿಸಲು ಆಸಕ್ತಿ ಮತ್ತು ಬದ್ಧತೆಯನ್ನು ಹೊಂದಿರಬೇಕು ಎಂದು ಗದಗ ಬೆಟಗೇರಿ-ನಗರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

ವಿಶ್ವ ಕ್ಯಾನ್ಸರ್ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ. ಗಣೇಶರಾವ್ ಕುಂದಾಪೂರ

ಕ್ಯಾನ್ಸರ್ ರೋಗಿಗಳಿಗೆ ಮನೋಸ್ಥೈರ್ಯ ತುಂಬಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ವಿಭಾಗ, ತಂಬಾಕು ನಿಯಂತ್ರಣ ಕೋಶ ಹಾಗೂ ಎಸ್.ಟಿ.ಎಸ್. ಕೆ.ಕೆ ಪಾಲಿಟೆಕ್ನಿಕ್ ಕಾಲೇಜು ಗದಗ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಕ್ಯಾನ್ಸರ್ ದಿನದ ಅಂಗವಾಗಿ ಮಂಗಳವಾರ ವಿದ್ಯಾರ್ಥಿಗಳಿಗೆ ಕ್ಯಾನ್ಸರ್ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ಡಾ. ಗಣೇಶರಾವ್ ಕುಂದಾಪೂರ ಮಾತನಾಡಿ, ವಿಶ್ವ ಕ್ಯಾನ್ಸರ್ ದಿನಾಚರಣೆಯನ್ನು ಪ್ರತಿ ವರ್ಷ ಫೆ.4ರಂದು ಆಚರಿಸಲಾಗುತ್ತಿದ್ದು, ಕ್ಯಾನ್ಸರ್ ಖಾಯಿಲೆಯನ್ನು ಮುನ್ನೆಚ್ಚರಿಕೆ ಮತ್ತು ಆರಂಭಿಕ ಹಂತದಲ್ಲಿ ಪತ್ತೆ ಮಾಡುವುದು ಮುಖ್ಯವಾಗಿದೆ ಎಂದರು.

ಅಸಾಂಕ್ರಾಮಿಕ ರೋಗಗಳಲ್ಲಿ ಹೃದಯ ಸಂಬಂಧಿತ ಖಾಯಿಲೆಯ ನಂತರದಲ್ಲಿ 2ನೇ ಸ್ಥಾನದಲ್ಲಿ ಕ್ಯಾನ್ಸರ್‌ನಿಂದ ಅತೀ ಹೆಚ್ಚು ಸಾವು ಸಂಭವಿಸುತ್ತಿವೆ. ಕ್ಯಾನ್ಸರ್ ಖಾಯಿಲೆಯು ಅನಿಯಂತ್ರಿತ ಜೀವಕೋಶ ವಿಭಜನೆಗಳಿಂದ ದೇಹದಲ್ಲಿ ಬೆಳವಣಿಗೆಯಾಗುವ ಗಡ್ಡೆಯಾಗಿದೆ. ಕ್ಯಾನ್ಸರ್ ಜೀವಕೋಶವು ಲಿಂಪ್‌ನೋಡ್ಸ್ ಮುಖಾಂತರ ದೇಹದ ಎಲ್ಲಾ ಭಾಗಗಳಲ್ಲಿ ಪಸರಿಸುತ್ತದೆ. ಕ್ಯಾನ್ಸರ್ ರೋಗದಲ್ಲಿ ನಾಲ್ಕು ಹಂತಗಳಿದ್ದು, ಮೊದಲನೇ ಮತ್ತು ಎರಡನೇ ಹಂತದಲ್ಲಿರುವ ಕ್ಯಾನ್ಸರ್ ರೋಗವನ್ನು ತಜ್ಞ ವೈದ್ಯರಲ್ಲಿ ಚಿಕಿತ್ಸೆ ಪಡೆದರೆ ಸಂಪೂರ್ಣ ಗುಣಪಡಿಸಬಹುದೆಂದು ತಿಳಿಸಿದರು.

ಈಗಿನ ಆಧುನಿಕ ಜೀವನ ಶೈಲಿ ಮತ್ತು ತಂಬಾಕು ಸೇವನೆಯಿಂದ ಅತೀ ಹೆಚ್ಚು ಕ್ಯಾನ್ಸರ್ ರೋಗಗಳು ಕಂಡುಬರುತ್ತಿವೆ. ಪುರುಷರಲ್ಲಿ ಬಾಯಿ, ಅನ್ನನಾಳ, ಶ್ವಾಸಕೋಶ ಮತ್ತು ಲೀವರ್ ಕ್ಯಾನ್ಸರ್‌ಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಮಹಿಳೆಯರಲ್ಲಿ ಸ್ತನ, ಗರ್ಭಕಂಠ ಮತ್ತು ಅಂಡಾಣುವಿನ ಕ್ಯಾನ್ಸರ್ ಸಾಮಾನ್ಯವಾಗಿ ಕಂಡುಬರುತ್ತವೆ. ಕ್ಯಾನ್ಸರ್ ರೋಗಿಗಳಿಗೆ ಸರಿಯಾದ ಚಿಕಿತ್ಸೆ, ಆರೈಕೆ ಹಾಗೂ ಮನೋಸ್ಥೈರ್ಯದ ಮಾತುಗಳಿಂದ ಗುಣಪಡಿಸಬಹುದು. ಉತ್ತಮ ಜೀವನ ಶೈಲಿ, ಸಮತೋಲನ ಆಹಾರ, ತರಕಾರಿ ಹಣ್ಣು ಹಂಪಲಗಳ ಸೇವನೆ, ಪ್ರತಿನಿತ್ಯ ಯೋಗ, ಧ್ಯಾನ ಮತ್ತು ದೈಹಿಕ ಚಟುವಟಿಕೆಯಿಂದ ಕ್ಯಾನ್ಸರ್ ಖಾಯಿಲೆ ಬರದಂತೆ ತಡೆಯಬಹುದೆಂದು ತಿಳಿಸಿದರು.

ಜಿಲ್ಲಾ ಸಮೀಕ್ಷಣಾಧಿಕಾರಿ ಹಾಗೂ ಕಾರ್ಯಕ್ರಮಾಧಿಕಾರಿ ಡಾ. ವೆಂಕಟೇಶ ರಾಠೋಡ ಮಾತನಾಡುತ್ತ, ನಮ್ಮ ದೇಶದಲ್ಲಿ ಪ್ರತಿ ವರ್ಷ 14,13,316 ಹೊಸ ಕ್ಯಾನ್ಸರ್ ಪ್ರಕರಣಗಳು ಪತ್ತೆಯಾಗುತ್ತಿದ್ದು, ಅವುಗಳಲ್ಲಿ 30-60 ವಯಸ್ಸಿನವರಲ್ಲಿ 9,16,827 ರೋಗಿಗಳು ಸಾವನ್ನಪ್ಪುತ್ತಿದ್ದಾರೆ. ಮಹಿಳೆಯರಲ್ಲಿ ಸ್ತನ ಮತ್ತು ಗರ್ಭಕಂಠದ ಕ್ಯಾನ್ಸರ್‌ನಿಂದ ಅತೀ ಹೆಚ್ಚಾಗಿ ಸಾವನ್ನಪ್ಪುತ್ತಿದ್ದಾರೆ ಎಂದು ತಿಳಿಸಿದರು.

ರಾಷ್ಟ್ರೀಯ ಅಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಸಾಮಾನ್ಯ ಕ್ಯಾನ್ಸರ್‌ಗಳಾದ ಬಾಯಿ, ಸ್ತನ ಹಾಗೂ ಗರ್ಭಕಂಠದ ಕ್ಯಾನ್ಸರ್ ತಪಾಸಣೆಯನ್ನು ಜಿಲ್ಲೆಯ ಪ್ರತಿಯೊಂದು ಆರೋಗ್ಯ ಕೇಂದ್ರಗಳಲ್ಲಿ ಕೈಗೊಳ್ಳಲಾಗುತ್ತಿದ್ದು, 30 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರೂ ಕ್ಯಾನ್ಸರ್ ತಪಾಸಣೆ ಮಾಡಿಸಿಕೊಳ್ಳಬೇಕೆಂದು ತಿಳಿಸಿದರು.

ಎಸ್.ಟಿ.ಎಸ್.ಕೆ.ಕೆ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ, ಕ್ಯಾನ್ಸರ್ ಖಾಯಿಲೆ ಕುರಿತು ಇಂತಹ ಅಭೂತಪೂರ್ವ ಮಾಹಿತಿ ಹೊಂದಿದ ಕಾರ್ಯಕ್ರಮಗಳು ಎಲ್ಲ ಶಾಲಾ-ಕಾಲೇಜುಗಳಲ್ಲಿ ಹಮ್ಮಿಕೊಳ್ಳುವುದು ಅವಶ್ಯಕವಾಗಿದ್ದು, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಮೂಲಕ ಮನೆ ಹಾಗೂ ಸಮುದಾಯ ಮಟ್ಟದಲ್ಲಿ ಜಾಗೃತಿ ಮೂಡಿಸಲು ಅನುಕೂಲವಾಗುವುದೆಂದು ತಿಳಿಸಿದರು.

> ಜಿಲ್ಲೆಯಲ್ಲಿ ಅಸಾಂಕ್ರಾಮಿಕ ಕಾಯಿಲೆಗಳ ಪ್ರಾಥಮಿಕ ಹಂತದ ತಪಾಸಣೆಯನ್ನು ಪ್ರತೀ ಗ್ರಾಮಗಳಲ್ಲಿ ಕೈಗೊಳ್ಳಲಾಗುತ್ತಿದ್ದು, ಒಟ್ಟು 7 ಎನ್.ಸಿ.ಡಿ. ಕ್ಲಿನಿಕ್‌ಗಳು ಕಾರ್ಯ ನಿರ್ವಹಿಸುತ್ತಿವೆ. ಪ್ರತಿ ಆರೋಗ್ಯ ಕೇಂದ್ರಗಳಲ್ಲಿ ಅಸಾಂಕ್ರಾಮಿಕ ಕಾಯಿಲೆಗಳಿಗೆ ಉಚಿತ ತಪಾಸಣೆ ಮತ್ತು ಔಷಧ ವಿತರಿಸಲಾಗುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆಯು 2025ರ ಒಳಗಾಗಿ ಸುಮಾರು ಶೇ.25 ಅಸಾಂಕ್ರಾಮಿಕ ಕಾಯಿಲೆಗಳಿಂದ ಮರಣ ಹೊಂದುವುದನ್ನು ತಡೆಯುವ ಗುರಿಯನ್ನು ಹೊಂದಿದೆ ಎಂದು ಡಾ. ವೆಂಕಟೇಶ ರಾಠೋಡ ತಿಳಿಸಿದರು.

ಗಂಗಾ ಸಜ್ಜಗಾರ ಪ್ರಾರ್ಥಿಸಿದರು. ಎಸ್. ಎಸ್. ಪೀರಾ ಕಾರ್ಯಕ್ರಮ ನಿರೂಪಿಸಿದರು. ಮುತ್ತುನಗೌಡ ಎಸ್.ರಬ್ಬನಗೌಡ್ರ ಸ್ವಾಗತಿಸಿ ವಂದಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಕಾಂಬ್ಳೆ, ಪುಷ್ಪಾ ಪಾಟೀಲ, ಜಿಲ್ಲಾ ಕಾರ್ಯಕ್ರಮ ಸಂಯೋಜಕರಾದ ಡಾ.ರವಿ ಕಡಗಾವಿ, ಡಾ. ಪ್ರವೀಣ ನಿಡಗುಂದಿ, ಗೋಪಾಲ ಸುರಪುರ, ಪ್ರತೀಕ ಹುರಕಡ್ಲಿ, ವಿರೇಶ ಮದಕಟ್ಟಿ, ರಮೇಶ ಅರಹುಣಸಿ, ಜಿಲ್ಲಾ ಸಮೀಕ್ಷಾಧಿಕಾರಿಗಳ ಕಚೇರಿಯ ಸಿಬ್ಬಂದಿಗಳು ಹಾಗೂ ಎಸ್.ಟಿ.ಎಸ್.ಕೆ.ಕೆ. ಪಾಲಿಟೆಕ್ನಿಕ್ ಕಾಲೇಜಿನ ಎಲ್ಲ ಉಪನ್ಯಾಸಕರು, ಆಡಳಿತ ವರ್ಗದವರು, ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾನೂನು ಅರಿವು-ನೆರವು ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಪಿ.ಎಫ್. ದೊಡ್ಡಮನಿ

ಮಕ್ಕಳನ್ನು ಉತ್ತಮ ನಾಗರಿಕರನ್ನಾಗಿ ರೂಪಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸಮಾಜಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹುಬ್ಬಳ್ಳಿ-ಧಾರವಾಡ, ಕರ್ನಾಟಕ ವಿಶ್ವವಿದ್ಯಾನಿಲಯದ ಸಮಾಜಕಾರ್ಯ ವಿಭಾಗ, ಸರ್.ಸಿದ್ದಪ್ಪ ಕಂಬಳಿ ಕಾನೂನು ಮಹಾವಿದ್ಯಾಲಯ ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವರ್ಗದವರಿಗೆ ಇರುವ ಸರ್ಕಾರದ ಸೌಲಭ್ಯಗಳ ಕುರಿತು ಕಾನೂನು ಅರಿವು-ನೆರವು ಕಾರ್ಯಕ್ರಮವನ್ನು ಧಾರವಾಡ ಸಿದ್ದೇಶ್ವರ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪರುಶುರಾಮ ಎಫ್. ದೊಡ್ಡಮನಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವರ್ಗದವರಿಗೆ ದೊರೆಯುತ್ತಿರುವ ಸೌಲಭ್ಯಗಳನ್ನು ಸಮರ್ಪಕವಾಗಿ ಸದುಪಯೋಗ ಪಡಿಸಿಕೊಳ್ಳಬೇಕು. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರವು ಬಡತನ, ಶಿಕ್ಷಣ, ಸಾರ್ವಜನಿಕರಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಬಗ್ಗೆ ಜಾಗೃತಿ ಮೂಡಿಸುವುದು, ದುರ್ಬಲ ವರ್ಗದವರಿಗೆ ಕಾನೂನು ನೆರವು-ಅರಿವು ನೀಡುವುದು ಮುಂತಾದ ವಿಷಯಗಳ ಕುರಿತು ಸದಾ ಮಾರ್ಗದರ್ಶನವನ್ನು ಮಾಡುತ್ತಿದೆ. ಸಿದ್ದೇಶ್ವರ ನಗರದಲ್ಲಿ ಕೂಡ ಸಾರ್ವಜನಿಕರ ಹಿತದೃಷ್ಟಿಯಿಂದ ಹಾಗೂ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಸಮೀಕ್ಷೆಯನ್ನು ಮಾಡಲಾಗಿದೆ ಎಂದು ತಿಳಿಸಿದರು.

ತಹಸೀಲ್ದಾರ ಡಿ.ಹೆಚ್. ಹೂಗಾರ ಮಾತನಾಡಿ, ಸಮಾಜದಲ್ಲಿ ದುರ್ಬಲ ವರ್ಗದ ಜನರ ಕಲ್ಯಾಣಕ್ಕಾಗಿ ಜಾರಿಗೆ ತಂದಿರುವ ಹಲವಾರು ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಪ್ರಾಮಾಣಿಕವಾದ ಪ್ರಯತ್ನಗಳನ್ನು ಮಾಡಲಾಗುತ್ತಿದೆ. ಜನರು ಕೂಡ ಇಂತಹ ಸೌಲಭ್ಯಗಳನ್ನು ಪಡೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಪಡೆದುಕೊಳ್ಳಬೇಕು. ಕಂದಾಯ ಇಲಾಖೆ ಅಡಿಯಲ್ಲಿ ಹಲವಾರು ಯೋಜನೆಗಳನ್ನು ಸಮರ್ಪಕವಾಗಿ ಜನರಿಗೆ ಮುಟ್ಟಿಸಲು ಅಗತ್ಯಕ್ರಮವನ್ನು ಕೈಗೊಳ್ಳಲಾಗಿದೆಯೆಂದು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಎಮ್.ಡಿ. ಸನ್ನೇರ ಮಾತನಾಡಿ, ಸಿದ್ದೇಶ್ವರ ನಗರದ ಜನರು ಎದುರಿಸುತ್ತಿರುವ ಕೆಲವು ಮುಖ್ಯ ಮೂಲಭೂತ ಸಮಸ್ಯೆಗಳನ್ನು ಹಿರಿಯ ಸಿವಿಲ್ ನ್ಯಾಯಾಧೀಶರ ಗಮನಕ್ಕೆ ತಂದಿದ್ದಾರೆ. ಇವುಗಳ ಸಮಸ್ಯೆಗಳಿಗೆ ಸೂಕ್ತ ರೀತಿಯಲ್ಲಿ ಸ್ಪಂದಿಸಿ ಸಂಬಂಧಿಸಿದ ಇಲಾಖೆಗಳಿಗೆ ನಿರ್ದೇಶನ ನೀಡುವುದಾಗಿ ತಿಳಿಸಿದರು.

> ಕರ್ನಾಟಕ ವಿಶ್ವವಿದ್ಯಾಲಯದ ಸಮಾಜಕಾರ್ಯ ವಿಭಾಗದ ವಿದ್ಯಾರ್ಥಿಗಳು ಮಾಡಿದ ಕಿರು ಸಮೀಕ್ಷೆಗೆ ಮೆಚ್ಚುಗೆ ವ್ಯಕ್ತಪಡಿಸಿದ ನ್ಯಾಯಾಧೀಶರು, ಇಂತಹ ಕಿರು ಸಮೀಕ್ಷೆಗಳು ಜನರ ನೈಜ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು ನೆರವಾಗುತ್ತವೆ ಮತ್ತು ಧಾರವಾಡ ಜಿಲ್ಲೆಯಲ್ಲಿ ಅತ್ಯಂತ ಸಮಸ್ಯೆ ಇರುವ ಕೊಳಚೆ ಪ್ರದೇಶಗಳಲ್ಲಿ ಹಾಗೂ ಇತರ ಕೆಲವು ಸ್ಥಳಗಳಲ್ಲಿ ಸಮೀಕ್ಷೆ ಮಾಡುವ ಕುರಿತು ಚರ್ಚಿಸಲಾಗುತ್ತಿದೆಯೆಂದರು.

ಕಾರ್ಯಕ್ರಮದಲ್ಲಿ ಅಖಿಲ ಕರ್ನಾಟಕ ಸುಡಗಾಡ ಸಿದ್ದರ ಮಾಹಾಸಂಘ ಉಪಾಧ್ಯಕ್ಷ ಲಕ್ಷ್ಮಣ ಡಿ.ಕರಿಯವರ, ಕರ್ನಾಟಕ ವಿಶ್ವವಿದ್ಯಾಲಯ ಸಮಾಜಕಾರ್ಯ ವಿಭಾಗ ಪ್ರಾಧ್ಯಾಪಕಿ ಹಾಗೂ ಮುಖ್ಯಸ್ಥೆ ಡಾ. ಸಂಗೀತಾ ಆರ್.ಮಾನೆ, ಸಮಾಜಕಾರ್ಯ ವಿಭಾಗದ ಬೋಧಕ ಸಿಬ್ಬಂದಿಗಳಾದ ರಾಜವರ್ಧನ್, ತುಕಾರಾಮ್, ಡಾ. ರವೀಂದ್ರ ಎಮ್., ಸಾಮಾಜಿಕ ಕಾರ್ಯಕರ್ತ ಅಶೋಕ ಕೋರಿ ಮುಂತಾದವರು ಉಪಸ್ಥಿತರಿದ್ದರು. ರಾಜು ಕಾರ್ಯಕ್ರಮ ನಿರೂಪಿಸಿದರು.

ಕ್ಯಾನ್ಸರ್ ರೋಗಿಗಳಿಗೆ ಬೆಂಬಲ ನೀಡಿ

WORLD CANCER DAY 2025
THEME
UNITED BY
UNIQUE
DATE:04-02-2025

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಿ.ಪಿ. ಗಾಲಾ ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಸೈನ್ಸ್ ಕಾಲೇಜಿನಲ್ಲಿ ವರ್ಲ್ಡ್ ಕ್ಯಾನ್ಸರ್ ಡೇ ಕಾರ್ಯಕ್ರಮ ಆಚರಿಸಲಾಯಿತು. ಪ್ರಾಚಾರ್ಯ ಅಮರಯ್ಯ ಚಿನ್ನಯ್ಯನಮಠ ಮಾತನಾಡಿ, ಫೆಬ್ರವರಿ 4, ವಿಶ್ವ ಕ್ಯಾನ್ಸರ್ ದಿನ. ಈ ದಿನವನ್ನು ನಾವು ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು, ಅದರ ತಡೆಗಟ್ಟುವಿಕೆ ಮತ್ತು ಚಿಕಿತ್ಸೆಯ ಬಗ್ಗೆ ಜನರಲ್ಲಿ ಅರಿವು ಹೆಚ್ಚಿಸಲು ಆಚರಿಸುತ್ತೇವೆ. ಕ್ಯಾನ್ಸರ್ ಒಂದು ಮಾರಣಾಂತಿಕ ಕಾಯಿಲೆಯಾಗಿದ್ದು, ಇದು ಜಗತ್ತಿನಾದ್ಯಂತ ಲಕ್ಷಾಂತರ ಜನರ ಸಾವಿಗೆ ಕಾರಣವಾಗಿದೆ. ಆದರೆ, ನಾವು ಈ ಸತ್ಯವನ್ನು ಒಪ್ಪಿಕೊಳ್ಳುವ ಜೊತೆಗೆ, ಕ್ಯಾನ್ಸರ್‌ನ್ನು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚಿದರೆ ಮತ್ತು ಸೂಕ್ತ ಚಿಕಿತ್ಸೆ ಪಡೆದರೆ ಗುಣಪಡಿಸಬಹುದು ಎಂಬುದನ್ನು ನೆನಪಿಟ್ಟುಕೊಳ್ಳಬೇಕು ಎಂದರು. ವಿಶ್ವ ಕ್ಯಾನ್ಸರ್ ದಿನದಂದು ನಾವೆಲ್ಲರೂ ಒಗ್ಗೂಡಿ ಕ್ಯಾನ್ಸರ್ ವಿರುದ್ಧ ಹೋರಾಡಲು ಪ್ರತಿಜ್ಞೆ ಮಾಡೋಣ. ಜಾಗೃತಿ ಮೂಡಿಸುವ ಮೂಲಕ ಮತ್ತು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವ ಮೂಲಕ ಕ್ಯಾನ್ಸರ್ ಮುಕ್ತ ಸಮಾಜವನ್ನು ನಿರ್ಮಿಸೋಣ. ಕ್ಯಾನ್ಸರ್ ರೋಗಿಗಳಿಗೆ ಬೆಂಬಲ ನೀಡಿ, ಅವರಿಗೆ ಧೈರ್ಯ ತುಂಬೋಣ ಎಂದರು. ಕಾರ್ಯಕ್ರಮದಲ್ಲಿ ಕಾಲೇಜಿನ ಎಲ್ಲ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾಲೇಜಿನ ಅಧ್ಯಕ್ಷೆ ರಚನಾ ಗಾಲಾ, ಸೆಕ್ರೆಟರಿ ಪಂಕಜ್ ಗಾಲಾ, ನಿರ್ದೇಶಕ ಗುಂಜನ ಗಾಲಾ ಮುಂತಾದವರಿದ್ದರು.

ಧಾರವಾಡದ ಕೃಷಿ ವಿಶ್ವವಿದ್ಯಾಲಯದಲ್ಲಿ ಸ್ಟಾರ್ಟಅಪ್‌ಗಳ ಬಲವರ್ಧನಾ ಶಿಬಿರ

ಸ್ಟಾರ್ಟ್‌ಅಪ್‌ಗಳನ್ನು ಹೆಚ್ಚಿಸಲು ಯೋಜನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ಆಕ್ಸಲರೇಟರ್ ನೆಟ್‌ವರ್ಕ್‌ನಡಿಯಲ್ಲಿ ಇಂಡಕ್ಷನ್ ಮತ್ತು ಸ್ಟಾರ್ಟ್‌ಅಪ್ ಬೂಟ್‌ಕ್ಯಾಂಪ್ ಕಾರ್ಯಕ್ರಮವು ಧಾರವಾಡದ ಕೃಷಿ ವಿಶ್ವವಿದ್ಯಾಲಯದಲ್ಲಿ ಮೂರು ದಿನಗಳ ಕಾಲ ನಡೆಯಿತು.

GINSERV
ASTRA
TURBOCHARGE
Startup's AC
KRISHIK
Agri Business Incubator
Center of Excellence

ಧಾರವಾಡ ಕೃ.ವಿ.ವಿ. ಕೃ.ವಿ.ವಿ.ಯ ಸಂಶೋಧನಾ ನಿರ್ದೇಶಕರಾದ ಡಾ. ಬಿ.ಡಿ. ಬಿರಾದಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಮಾರುಕಟ್ಟೆ ಬೇಡಿಕೆಗಳಿಗೆ ಅನುಗುಣವಾಗಿ ವ್ಯಾಪಾರ ತಂತ್ರದ ಪುನರ್ವಿಮರ್ಶೆಗಳು, ಉತ್ಪನ್ನ-ಮಾರುಕಟ್ಟೆ ಹೊಂದಾಣಿಕೆಗಾಗಿ ಮಾರುಕಟ್ಟೆ ಮೌಲ್ಯೀಕರಣ, ಗ್ರಾಹಕರನ್ನು ಸೆಳೆಯುವ ತಂತ್ರಗಳು ಮತ್ತು ಹೂಡಿಕೆ ಸಿದ್ಧತೆ ತಂತ್ರಗಳು ಇತ್ಯಾದಿಗಳ ಕುರಿತು ಈ ಶಿಬಿರದಲ್ಲಿ ಮಾರ್ಗದರ್ಶನ ಮತ್ತು ತರಬೇತಿ ನೀಡಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ಆಕ್ಸಿಲರೇಷನ್ ನೆಟ್‌ವರ್ಕ್ ಕರ್ನಾಟಕ ಸರ್ಕಾರದ ಸ್ಟಾರ್ಟ್‌ಅಪ್‌ಗಳನ್ನು ಸಬಲೀಕರಣಗೊಳಿಸುವುದು ಮತ್ತು ರಾಜ್ಯದ ಅಭಿವೃದ್ಧಿಗೆ ಸ್ಟಾರ್ಟ್‌ಅಪ್‌ಗಳಿಗೆ ಪರಿಸರ ವ್ಯವಸ್ಥೆಯನ್ನು ಬಲಪಡಿಸುವುದಾಗಿದೆ. ಬೆಂಗಳೂರು, ಮೈಸೂರು, ಮಂಗಳೂರು ಮತ್ತು ಹುಬ್ಬಳ್ಳಿ-ಧಾರವಾಡ-ಬೆಳಗಾವಿ ಸೇರಿದಂತೆ ಕರ್ನಾಟಕದಾದ್ಯಂತ ಆಕ್ಸಲರೇಟರ್‌ಗಳು, ಇನ್‌ಕ್ಯುಬೇಟರ್‌ಗಳು ಮತ್ತು ಉದ್ಯಮ ಮುಂದಾಳುಗಳ ಜಾಲದೊಂದಿಗೆ ಸಂಪರ್ಕ ಸಾಧಿಸುವ ಮೂಲಕ ಸ್ಟಾರ್ಟ್‌ಅಪ್‌ಗಳ ಸಂಖ್ಯೆಯನ್ನು ಹೆಚ್ಚಿಸುವ ಉದ್ದೇಶದಿಂದ ಈ ಆರು ತಿಂಗಳ ಅವಧಿಯ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ.

ಈ ಯೋಜನೆಯಲ್ಲಿ ಸ್ಟಾರ್ಟ್‌ಅಪ್‌ಗಳಿಗೆ ತಜ್ಞರ ಮಾರ್ಗದರ್ಶನ, ಮೂಲಸೌಕರ್ಯ, ಮಾರುಕಟ್ಟೆ ಸಂಪರ್ಕಗಳು ಮತ್ತು ಸಾಹಸೋದ್ಯಮ ಬಂಡವಾಳಶಾಹಿಗಳಿಂದ ಪ್ರೋತ್ಸಾಹ ಒದಗಿಸುವುದು, ಜ್ಞಾನ ವಿನಿಮಯ, ಅಂತಾರಾಷ್ಟ್ರೀಯ ವಿಸ್ತರಣೆ, ಸಂಶೋಧನೆ ಮತ್ತು ಅಭಿವೃದ್ಧಿಯ ವಾಣಿಜ್ಯೀಕರಣ ಮತ್ತು ಬೌದ್ಧಿಕ ಆಸ್ತಿ ವಿಷಯದ ಮೇಲೆ ಕೇಂದ್ರೀಕರಿಸುವ ಮೂಲಕ, ಈ ಕಾರ್ಯಕ್ರಮವು ಮುಂದಿನ ಮೂರು ವರ್ಷಗಳಲ್ಲಿ 360 ಸ್ಟಾರ್ಟ್‌ಅಪ್‌ಗಳ ಮೇಲೆ ಪ್ರಭಾವ ಬೀರಲಿದೆ. ಇದು ರಾಜ್ಯಾದ್ಯಂತ ನಾವೀನ್ಯತೆ ಮತ್ತು ಆರ್ಥಿಕ ಅಭಿವೃದ್ಧಿಯನ್ನು ಉತ್ತೇಜಿಸುತ್ತದೆ ಎಂದರು.

> ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ (ಕೆಡಿಇಎಂ), ಸ್ಟಾರ್ಟ್‌ಅಪ್ ಕರ್ನಾಟಕ ಮತ್ತು ಕರ್ನಾಟಕ ಸರ್ಕಾರದ ಐಟಿ, ಬಿಟಿ ಮತ್ತು ಎಸ್‌ಆ್ಯಂಡ್ ಟಿ ವಿಭಾಗದ ಕೆ-ಟೆಕ್, ಕಿಟ್ಸ್‌ನ ಪ್ರಮುಖ ಉಪಕ್ರಮವಾಗಿದ್ದು, ಕರ್ನಾಟಕ ಆಕ್ಸಲರೇಟರ್ ನೆಟ್‌ವರ್ಕ್(ಕೆಎಎನ್), ಬೆಂಗಳೂರಿನ ಜಿನ್‌ಸರ್ವ್ ಮಾರ್ಗದರ್ಶಕ ಪಾಲುದಾರರಾಗಿ ಮತ್ತು ಕೃವಿವಿ, ಧಾರವಾಡ (ಂಖಖಿಖಂ) ಮಾರ್ಗದರ್ಶಕ ಪಾಲುದಾರರಾಗಿ ಅಲ್ಲದೇ 20 ನವೋದ್ಯಮಗಳು ಇದರಲ್ಲಿ ಪಾಲ್ಗೊಂಡಿದ್ದವು.

ಕಾರ್ಯಕ್ರಮದಲ್ಲಿ ಕರ್ನಾಟಕ ಅಭಿವೃದ್ಧಿ ಮತ್ತು ಉದ್ಯೋಗ ಮಿಷನ್‌ನ ಯೋಜನಾ ವ್ಯವಸ್ಥಾಪಕರಾದ ಕಿರಣ್ ಕುಲಕರ್ಣಿ, ಡಾ. ಎಸ್.ಎಸ್. ಡೊಳ್ಳಿ, ಜಿನ್‌ಸರ್ವ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿರೀಶ ಹಿರೇಮಠ, ಡಾ. ಜಿ.ಬಸವರಾಜ, ಅಸ್ತ್ರಾ(ಂಖಖಿಖಂ) ಮತ್ತು ಜಿನ್‌ಸರ್ವ್‌ನ (ಉಖಓಖಇಖಗಿ) ಪ್ರತಿನಿಧಿಗಳು ಸೇರಿದಂತೆ ಇತರ ಗಣ್ಯರು ಭಾಗವಹಿಸಿದ್ದರು.

ಕರ್ನಾಟಕ ಸರ್ಕಾರ
ಕಾರ್ಯನಿರ್ವಾಹಕ ಇಂಜನೀಯರರು
ಲೋಕೋಪಯೋಗಿ ಇಲಾಖೆ ವಿಭಾಗ ಗದಗ
Phone No: 08372-238782 Fax No. 08372-237268
E.Mail : eepwdgad@gmail.com
ನಂ:ಕಾನಿಇಂಗಃಲೋಇ:ಪಿಬಿ-2:ಅವಧಿ ವಿಸ್ತರಣೆ:2024-25:4262
ದಿನಾಂಕ : 04-02-2025

ಟೆಂಡರ್ ಪ್ರಕಟಣೆ ಅವಧಿ ವಿಸ್ತರಣೆ ಹಾಗೂ ತಿದ್ದುಪಡಿ ಟೆಂಡರ್ ಪ್ರಕಟಣೆ

ಭಾಗ-1 : ಈ ಕಛೇರಿ ಟೆಂಡರ್ ಪ್ರಕಟಣೆ ಪತ್ರ ನಂ : **4167** ದಿ : **27-01-2025** ರಲ್ಲಿ ವಿವಿಧ ಲೆಕ್ಕ ಶೀರ್ಷಿಕೆಯಡಿ ಕರೆಯಲಾದ ಕಾಮಗಾರಿಯ (ವರ್ಕ ಇಂಡೆಂಟ್ ನಂ : **18522** ಬದಲಾಗಿ **18526** ಎಂದು ಓದಿಕೊಳ್ಳುವದು ಹಾಗೂ **18531** ಎಸ್ ಟಿ ಬದಲಾಗಿ **18531** ಸಾಮಾನ್ಯ, **18530** ಸಾಮಾನ್ಯ ಬದಲಾಗಿ **18530** ಎಸ್ ಟಿ ಎಂದು ಓದಿಕೊಳ್ಳುವದು, ಮತ್ತು ಮೇಲಿನ ಟೆಂಡರ್ ಪ್ರಕಣೆಯಲ್ಲಿಯ **18540,18532**-SC, **18538-SC, 18528, 18541-SC, 18534, 18536,** ಕಾಮಗಾರಿಗಳ ಟೆಂಡರ್ ಅವಧಿಯನ್ನು ವಿಸ್ತರಿಸಲಾಗಿರುತ್ತದೆ ಹಾಗೂ

ಭಾಗ-2 : ವರ್ಕ ಇಂಡೆಂಟ್ ನಂ 16799/Call-2, 6032/Call-2,16266-Category-2A, 18565-ST ಹಾಗೂ 16865-SC/Call-2
ಮೇಲಿನ ಭಾಗ- 1) ರಲ್ಲಿ ಬರುವ ಕಾಮಗಾರಿಗಳ ಟೆಂಡರ ವಿವರ ಪ್ರಶ್ನೋತ್ತರ ದಿನಾಂಕ : **05-02-2025** ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ : **11-02-2025** ಮಧ್ಯಾಹ್ನ 4.00 ಘಂಟೆಯ ವರೆಗೆ, ತಾಂತ್ರಿಕ /ಆರ್ಥಿಕ ಬಿಡ್ ತೆರೆಯುವ ದಿನಾಂಕ : **12-02-2025**
ಮೇಲಿನ ಭಾಗ-2) ರಲ್ಲಿ ಬರುವ ಕಾಮಗಾರಿಗಳ ಟೆಂಡರ ವಿವರ ಪ್ರಶ್ನೋತ್ತರ ದಿನಾಂಕ : **05-02-2025** ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ : **11-02-2025** ಮಧ್ಯಾಹ್ನ 4.00 ಘಂಟೆಯ ವರೆಗೆ, ತಾಂತ್ರಿಕ /ಆರ್ಥಿಕ ಬಿಡ್ ತೆರೆಯುವ ದಿನಾಂಕ : **12-02-2025** ಆರ್ಥಿಕ ಬಿಡ್ ತೆರೆಯುವ ದಿನಾಂಕ : **13-02-2025**
ಸೂಚನೆ : ಮೇಲಿನ ಭಾಗ-1 ರಲ್ಲಿ ಬರುವ ಕಾಮಗಾರಿಗಳ ಟೆಂಡರಿನಲ್ಲಿ ಭಾಗವಹಿಸಲು ಆಸಕ್ತಿವುಳ್ಳ ಗುತ್ತಿಗೆದಾರರು ದಿನಾಂಕ : **06-02-2025** ರಂದು ಪೂರ್ವಾಹ್ನ 11.30 ಘಂಟೆಗೆ ಲೋ ಇ ಗದಗ ವಿಭಾಗ ಗದಗ ಕಛೇರಿಯಲ್ಲಿ ನಡೆಯುವ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಸಂಚಾರಿ ಗಣತಿಯ ಸಾಮಗ್ರಿ/ತಂತ್ರಾಂಶದ 'ಡೆಮೊ' ವನ್ನು ಪ್ರದರ್ಶಿಸಿ ಟೆಂಡರಿನಲ್ಲಿ ಭಾಗವಹಿಸತಕ್ಕದ್ದು.

ಜಿ ಎಸ್ ಟಿ ಮೊತ್ತವನ್ನು ಚಾಲ್ತಿಯಲ್ಲಿರುವ ಸರ್ಕಾರದ ಆದೇಶದಂತೆ ಪಾವತಿಸಲಾಗುವದು. ಗುತ್ತಿಗೆ ಅವಧಿಯನ್ನು ಗುತ್ತಿಗೆದಾರರ ವಿಳಂಬದಿಂದ ವಿಸ್ತರಿಸಿದಲ್ಲಿ ವಿಸ್ತ್ರತ ಗುತ್ತಿಗೆ ಅವಧಿಯಲ್ಲಿ ಆಗುವ ಜಿಎಸ್‌ಟಿ ಹೆಚ್ಚಳವನ್ನು ಗುತ್ತಿಗೆದಾರರೇ ಭರಿಸತಕ್ಕದ್ದು.

ಅನುಸೂಚಿತ ಜಾತಿ ಮತ್ತು ಪಂಗಡ ಹಾಗೂ ಕೆಟಗರಿ-1, ಕೆಟಗರಿ-2ಎ ಕ್ಕೆ ಮೀಸಲಿರಿಸಿದ ಕಾಮಗಾರಿಗಳ ಟೆಂಡರ್‌ಗಳಲ್ಲಿ ಭಾಗವಹಿಸುವ ಗುತ್ತಿಗೆದಾರರು ಕಡ್ಡಾಯವಾಗಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪೂರಕ ದಾಖಲೆಗಳಾದ ಜಾತಿ ಪ್ರಮಾಣ ಪತ್ರ, 10 ವರ್ಷದ ರಹವಾಸಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಸಹಿ/- ಕಾರ್ಯಪಾಲಕ ಅಭಿಯಂತರರು,
ಲೋಕೋಪಯೋಗಿ ಇಲಾಖೆ, ವಿಭಾಗ, ಗದಗ
ವಾಸಾಸಂಇ/ಗದಗ/ಕೆಎಸ್ಎಂಸಿಎ/585/2024-25

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103,
Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka